ಸಂಪುಟ : 10 ಸಂಚಿಕೆ: 65 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 65 Pages : 4+2 Price : 3.00 Thursday April 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಚೆಕ್ ಬೌನ್ಸ್ ಪ್ರಕರಣ: ಮಾಜಿ ಸಚಿವ ಬಿ.ನಾಗೇಂದ್ರ ಸೇರಿ ಮೂವರಿಗೆ ಶಿಕ್ಷೆ ಪ್ರಕಟ, 1 ಕೋಟಿ 25 ಲಕ್ಷ ದಂಡ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮಾಜಿ ಸಚಿವ ಬಿ.ನಾಗೇಂದ್ರಗೆ ಬಿಗ್ ಶಾಕ್ ಎದುರಾಗಿದ್ದು, ಚೆಕ್ ಬೌನ್ಸ್ ಪ್ರಕರಣದಲ್ಲಿ ನಗರದ 42ನೇ ಎಸಿಜೆಎಂ ಕೋರ್ಟ್ ಶಿಕ್ಷೆ ಪ್ರಕಟಿಸಿದೆ.


ಬಿ.ನಾಗೇಂದ್ರ ಸೇರಿದಂತೆ ಮೂವರು ಆರೋಪಿಗಳಿಗೆ 1.25 ಕೋಟಿ ದಂಡ ಪಾವತಿಸುವಂತೆ ನ್ಯಾಯಾಲಯದ ಜಡ್ಜ್ ಕೆ.ಎನ್.ಶಿವಕುಮಾರ್ ಆದೇಶ ಹೊರಡಿಸಿದ್ದಾರೆ. ಒಂದು ವೇಳೆ ದಂಡ ಪಾವತಿಸದಿದ್ದರೆ 1 ವರ್ಷ ಸೆರೆವಾಸ ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ.

ಘಟನೆ ವಿವರ: ದೂರುದಾರ ವಿಎಸ್‌ಎಲ್ ಸ್ಟೀಲ್ಸ್ ಲಿಮಿಟೆಡ್ ಹಾಗೂ ಮಾಜಿ ಸಚಿವ ಬಿ.ನಾಗೇಂದ್ರ ಹಾಗೂ ಅನಿಲ್ ರಾಜಶೇಖರ್ ಚುಂಡೂರು ಭಾಸ್ಕರ್ ಪಾಲುದಾರಿಕೆಯ ಬಿ.ಸಿ. ಇನ್ಫ್ರಾಸ್ಟ್ರಕ್ಚರ್ ಅಂಡ್ ರಿಸೋರ್ಸ್ ಕಂಪನಿ ನಡುವೆ 2013 ರಿಂದಲೂ ಹಣಕಾಸು ವಿವಾದವಿತ್ತು. ವಿಎಸ್‌ಎಲ್ ಕಂಪನಿ ಪರವಾಗಿ ಕೋರ್ಟ್ ಆದೇಶ ನೀಡಿದ್ದು, ಬಿ. ನಾಗೇಂದ್ರ ಪಾಲುದಾರಿಕೆಯ ಕಂಪನಿ ಒಟ್ಟು 2 ಕೋಟಿ 53 ಲಕ್ಷ ಪಾವತಿಸಬೇಕಿತ್ತು. ಇದರ ಭಾಗವಾಗಿ 1 ಕೋಟಿ ರೂಪಾಯಿಯ ಚೆಕ್ ಅನ್ನು ನೀಡಲಾಗಿತ್ತು.

ಆದರೆ, 2022 ರಲ್ಲಿ ಚೆಕ್ ಬೌನ್ಸ್ ಆದ ಹಿನ್ನಲೆಯಲ್ಲಿ ವಿಎಸ್‌ಎಲ್ ಸ್ಟೀಲ್ಸ್ ಲಿಮಿಟೆಡ್ ಕೇಸ್ ದಾಖಲಿಸಿತ್ತು. ಸಾಕ್ಷ್ಯ ವಿಚಾರಣೆ ಬಳಿಕ ಕೋರ್ಟ್ ತೀರ್ಪು ನೀಡಿದ್ದು, 1 ಕೋಟಿ 23 ಲಕ್ಷ ದಂಡ ಪಾವತಿಸುವಂತೆ ಆದೇಶ ನೀಡಿದೆ. ಇದರಲ್ಲಿ 10 ಸಾವಿರ ಸರ್ಕಾರಕ್ಕೆ ಉಳಿದ ಹಣ ದೂರುದಾರ ಕಂಪೆನಿಗೆ ಪಾವತಿಸುವಂತೆ ಕೋರ್ಟ್ ಆದೇಶ ನೀಡಿದೆ.

## ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಎಪ್ರಿಲ್ 10 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಎಪ್ರಿಲ್ 10 ರಂದು ಬೆಳಿಗ್ಗೆ 10 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಗದುಗಿಗೆ ಆಗಮಿಸುವರು. ಅಂದು ಬೆಳಿಗ್ಗೆ 10.30 ಗಂಟೆಗೆ ಗದಗಿನ ಸರಕಾರಿ ಪ್ರೌಢಶಾಲೆ ಸಿದ್ಧಲಿಂಗ ನಗರದಲ್ಲಿನ 2005–2006ನೇ ಸಾಲಿನ ಎಸ್. ಎಸ್.ಎಲ್.ಸಿ. ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಬೈಲಹೊಂಗಲಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಪ.ಪೂ. ನೌಕರರ ಸಂಘದಿಂದ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ

# ಪ್ರಥಮ ಸ್ಥಾನವನ್ನು ಎಂದಿಗೂ ಬಿಟ್ಟುಕೊಡಬೇಡಿ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ತಮ್ಮ ಮುಂದಿನ ಅಧ್ಯಯನದಲ್ಲಿಯೂ ನಿರಂತರ ಶ್ರಮವಹಿಸಿ ಅಭ್ಯಾಸಗೈದು, ಪ್ರಥಮ ಸ್ಥಾನವನ್ನು ಎಂದಿಗೂ ಬಿಟ್ಟುಕೊಡಬೇಡಿ

> ಸಮಾರಂಭದಲ್ಲಿ ವಾಣಿಜ್ಯ ವಿಭಾಗದಲ್ಲಿ 592 (ಶೇ.98.66) ಅಂಕಗಳನ್ನು ಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ನವತಿಕ ಹಜಾರಿ, ವಿಜ್ಞಾನ ವಿಭಾಗದಲ್ಲಿ 590 (ಶೇ.98.33) ಅಂಕಗಳನ್ನು ಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಕಾವ್ಯ ಹಿರೇಗೌಡರ ಇವರಿಬ್ಬರೂ ಗದುಗಿನ ಜೆ.ಟಿ. ಕಾಲೇಜಿನ ವಿದ್ಯಾರ್ಥಿನಿಯರಾಗಿದ್ದಾರೆ. ಕಲಾ ವಿಭಾಗದಲ್ಲಿ 587 (ಶೇ.97.83) ಅಂಕಗಳನ್ನು ಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಮುಂಡರಗಿಯ ಜೆ.ಎ. ಪ.ಪೂ ಕಾಲೇಜಿನ ವಿದ್ಯಾರ್ಥಿನಿ ವಿಜಯಲಕ್ಷ್ಮೀ ಗೊಂಡಬಾಳ ಹಾಗೂ ಅವರ ಪಾಲಕರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಇದೇ ಸಂದರ್ಭದಲ್ಲಿ ವಿ.ಪ ಸದಸ್ಯ ಪ್ರೊ. ಎಸ್.ವಿ. ಸಂಕನೂರ ವಿದ್ಯಾರ್ಥಿನಿಯರಿಗೆ ನಗದು ಬಹುಮಾನ ನೀಡಿ ಪ್ರೋತ್ಸಾಹಿಸಿದರು.



ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅವರು ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ ಹಾಗೂ ಪ್ರೊ. ಎಸ್.ವಿ. ಸಂಕನೂರ ಅಭಿಮಾನಿ ಬಳಗ ಏರ್ಪಡಿಸಿದ್ದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗದಲ್ಲಿ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ವಿದ್ಯಾರ್ಥಿಗಳು ಹಾಗೂ ಪಾಲಕರನ್ನು ಸನ್ಮಾನಿಸಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ವಿದ್ಯೆಯು ಯಾರೊಬ್ಬರ ಸ್ವತ್ತು ಅಲ್ಲ. ಮೂವರು ವಿದ್ಯಾರ್ಥಿನಿಯರು ಬಡ ಕುಟುಂಬದಿಂದ ಬಂದಿದ್ದು, ಪರಿವಾರದ ತೊಂದರೆಗಳನ್ನು ಎದುರಿಸಿ ಉತ್ತಮ ಸಾಧನೆಗೈದು ಗದಗ ಜಿಲ್ಲೆಗೆ ಹಾಗೂ ಕಲಿತ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ವಿಜಯಲಕ್ಷ್ಮೀ ಗೊಂಡಬಾಳ ಕುರಿಗಾರಿಕೆ ಹಾಗೂ 33 ಜನರಿರುವ ಅವಿಭಕ್ತ ಕುಟುಂಬ ಹಿನ್ನೆಲೆಯಿಂದ ಬಂದಿದ್ದರೂ ಉತ್ತಮ ಸಾಧನೆಗೈದಿದ್ದಾಳೆ. ಕಾವ್ಯ ಹಿರೇಗೌಡರ ತಮ್ಮ ತಂದೆಯ ಅನಾರೋಗ್ಯ ಹಾಗೂ ಬಡತನದ ಸ್ಥಿತಿಯಲ್ಲಿಯೂ ಉತ್ತಮ ಅಂಕಗಳನ್ನು ಗಳಿಸಿದ್ದಾರೆ. ನವತಿಕಾ ಹಜಾರೆ ಅನೇಕ ಕೌಟುಂಬಿಕ ಕಷ್ಟಗಳಿದ್ದರೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಇವರೆಲ್ಲರೂ ತಮ್ಮ ಸಾಧನೆಯನ್ನು ಇಲ್ಲಿಗೆ ನಿಲ್ಲಿಸದೇ ದೃಢ ಸಂಕಲ್ಪ ಹಾಗೂ ಆತ್ಮವಿಶ್ವಾಸದಿಂದ ಮುನ್ನುಗ್ಗಿ, ಐ.ಎ.ಎಸ್, ಕೆ.ಎ.ಎಸ್‌ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉತ್ತಮ ಅಧಿಕಾರಿಗಳಾಗಿ ರೂಪಗೊಳ್ಳಬೇಕೆಂದು ಆಶಿಸಿದರು. ಸನ್ಮಾನ ಸ್ವೀಕರಿಸಿದ ವಿದ್ಯಾರ್ಥಿನಿಯರು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಕರ್ನಾಟಕ ರಾಜ್ಯ ಪ.ಪೂ ಮಹಾವಿದ್ಯಾಲಯದ ನೌಕರರ ಸಂಘದ ಅಧ್ಯಕ್ಷ ಅಶೋಕ ಅಂಗಡಿ ಸ್ವಾಗತಿಸಿದರು. ಜೆ.ಟಿ. ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಪಿ.ಜಿ. ಪಾಟೀಲ ಹಾಗೂ ಕರ್ನಾಟಕ ರಾಜ್ಯ ಪ.ಪೂ ಮಹಾವಿದ್ಯಾಲಯದ ನೌಕರರ ಸಂಘದ ಗೌರವಾಧ್ಯಕ್ಷ ಪವಾಡಿಗೌಡ್ರ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಾರ್ಯದರ್ಶಿ ಎಸ್.ಐ. ಮೇಟಿ ವಂದಿಸಿದರು. ಸಮಾರಂಭದಲ್ಲಿ ಪ್ರಾಚಾರ್ಯರುಗಳಾದ ಜೆ.ಎ. ಸಿರ್ಸಿ, ಡಾ. ಬಿ.ಎಸ್. ರಾಠೋಡ, ಎಸ್.ಎಸ್. ಕುಲಕರ್ಣಿ, ಬಿ.ವಿ. ಪಾಟೀಲ, ಉಪನ್ಯಾಸಕರುಗಳಾದ ಡಾ. ವಾಯ್.ಆರ್. ಬೇಲೇರಿ, ಪ್ರೊ. ಎಸ್.ಎನ್. ಕೌಲಗಿ, ಡಾ. ದತ್ತಪ್ರಸನ್ನ ಪಾಟೀಲ, ಎನ್.ವಿ. ಜೋಷಿ, ಪ್ರೀತಿ ಮೆಣಸಿನಕಾಯಿ ಹಾಗೂ ಪ.ಪೂ ನೌಕರರ ಸಂಘದ ಪದಾಧಿಕಾರಿಗಳು ಮತ್ತು ಸಂಕನೂರ ಅಭಿಮಾನಿ ಬಳಗದ ಸದಸ್ಯರು ಉಪಸ್ಥಿತರಿದ್ದರು.

> ವಿದ್ಯಾರ್ಥಿಗಳ ಸಾಧನೆ ನಿರಂತರವಾಗಿರಬೇಕು. ಜೀವನದಲ್ಲಿ ಬರುವ ಸಂಕಷ್ಟಗಳನ್ನು ಧೈರ್ಯದಿಂದ ಎದುರಿಸಿ ಮುನ್ನುಗ್ಗಬೇಕು. ಪಿಯುಸಿ ಪರೀಕ್ಷೆಯಲ್ಲಿ ಯಶಸ್ಸು ಗಳಿಸಿದಂತೆ ಜೀವನದ ಪ್ರತಿ ಹಂತದಲ್ಲಿಯೂ ಯಶಸ್ಸನ್ನು ಗಳಿಸುತ್ತ ಸಾಗಬೇಕು.
>
> **– ಸಿ.ಎನ್. ಶ್ರೀಧರ್.**
> **ಜಿಲ್ಲಾಧಿಕಾರಿಗಳು, ಗದಗ.**

### ಮುಸ್ಲಿಮರಿಗೆ ಗುತ್ತಿಗೆಗಳಲ್ಲಿ ಶೇ.4 ಮೀಸಲಾತಿ ವಿರೋಧಿಸಿ ವಿಶ್ವ ಹಿಂದೂ ಪರಿಷತ್‌ನಿಂದ ಪ್ರತಿಭಟನೆ

# ಮತ ಬ್ಯಾಂಕ್ ರಾಜಕಾರಣ ನಿಲ್ಲಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರವು ಸರ್ಕಾರಿ ಕಾಮಗಾರಿಗಳ ಗುತ್ತಿಗೆಯಲ್ಲಿ ಮುಸಲ್ಮಾನರಿಗೆ ಶೇ.4 ಮೀಸಲಾತಿ ನೀಡುವ ವಿಧೇಯಕಕ್ಕೆ ಒಪ್ಪಿಗೆ ನೀಡದಂತೆ ಕೋರಿ ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ ವತಿಯಿಂದ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ಸಂವಿಧಾನ ರಚನೆಯಾಗುವಾಗಲೇ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ಧರ್ಮಾಧಾರಿತ ಮೀಸಲಾತಿಯನ್ನು ವಿರೋಧಿಸಿದ್ದರು. ಅವರೇ ರಚಿಸಿದ ಸಂವಿಧಾನದ ಆರ್ಟಿಕಲ್ 15ರಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟವಾಗಿ ಧರ್ಮ ಮತ್ತು ಜಾತಿ ಆಧಾರದ ಮೇಲೆ ನಾಗರಿಕರಲ್ಲಿ ತಾರತಮ್ಯ ಮಾಡುವುದನ್ನು ನಿಷೇಧಿಸುತ್ತದೆ. ವಿವಿಧ ರಾಜ್ಯಗಳಲ್ಲಿ ಧರ್ಮಾಧಾರಿತ ಮೀಸಲಾತಿಯನ್ನು ಬದಲಿಸಲು ಇದೇ ರೀತಿ ಪ್ರಯತ್ನಗಳು ನಡೆದಾಗ ನ್ಯಾಯಾಲಯಗಳು ತಿರಸ್ಕರಿಸಿವೆ. ಸುಪ್ರೀಂ ಕೋರ್ಟ್ ಕೂಡ ಧರ್ಮದ ಆಧಾರದ ಮೇಲೆ ಮೀಸಲಾತಿಯನ್ನು ರದ್ದುಗೊಳಿಸಿದೆ. 77 ಸಮುದಾಯಗಳನ್ನು ಒಬಿಸಿ ಎಂದು ವರ್ಗೀಕರಿಸುವ ಪಶ್ಚಿಮ ಬಂಗಾಲದ ಸರ್ಕಾರದ ನಿರ್ಧಾರವನ್ನು ಸುಪ್ರೀಂಕೋರ್ಟ್ ರದ್ದುಗೊಳಿಸಿದೆ. ಹೀಗಿದ್ದರೂ ಕರ್ನಾಟಕ ಸರ್ಕಾರ ಮುಸ್ಲಿಂ ಸಮುದಾಯಕ್ಕೆ ಶೇ.4ರಷ್ಟು ಮೀಸಲಾತಿ ನೀಡುವ ಮೂಲಕ ಮತ ಬ್ಯಾಂಕ್ ರಾಜಕಾರಣ ಮಾಡುತ್ತಿದೆ. ಆಡಳಿತಾರೂಢ ಸರ್ಕಾರದ ವೋಟ್ ಬ್ಯಾಂಕ್ ಆಗಿರುವ ಸಮುದಾಯವನ್ನು ಸಮಾಧಾನಪಡಿಸಲು ಮೀಸಲಾತಿ ಒದಗಿಸುವ ಕಾರ್ಯವು ರಾಷ್ಟ್ರೀಯ ಸಮಗ್ರತೆ, ಏಕತೆ ಮತ್ತು ಸಾರ್ವಭೌಮತೆಗೆ ಅಪಾಯವನ್ನುಂಟುಮಾಡುತ್ತದೆ. ಈ ನಿಟ್ಟಿನಲ್ಲಿ ಈ ಮಸೂದೆಯನ್ನು ಅನುಮೋದಿಸದೆ ತಡೆಹಿಡಿಯಬೇಕೆಂದು ಪ್ರತಿಭಟನಾಕಾರರು ಮನವಿ ಪತ್ರದಲ್ಲಿ ವಿನಂತಿಸಿದರು. ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಶ್ರೀಧರ್ ಕುಲಕರ್ಣಿ, ಉಪಾಧ್ಯಕ್ಷರಾದ ರಾಣಿ ಆರ್. ಚಂದಾವರಿ, ಈರಣ್ಣ ಹೇಮಾದ್ರಿ, ಕಾರ್ಯದರ್ಶಿ ಸಂಜೀವ್ ಜೋಶಿ, ಕೋಶಾಧ್ಯಕ್ಷ ಮಾರುತಿ ಪವಾರ, ಗದಗ(ಗ್ರಾ) ಅಧ್ಯಕ್ಷರಾದ ವೀರೇಶ್ ಮಡಿವಾಳರ, ಗದಗ ನಗರ ಅಧ್ಯಕ್ಷ ಶ್ರೀನಿವಾಸ್ ಹುಬ್ಬಳ್ಳಿ, ಕಾರ್ತಿಕ್ ಪರ್ವತಗೌಡ, ಮಂಜುನಾಥ್ ಬಂಗಾರಿ, ವಿಜಯ ರೈಕರ್, ಸಂತೋಷ್ ಅಂಗಡಿ, ಪ್ರಸಾದ ಬಡಿಗೇರ್, ಅಶೋಕ ಜಕ್ಕಲಿ, ಸಂಜೀವ್ ರೆಡ್ಡಿ, ಕಪಿಲ್ ಜಿ, ಶ್ರೀಕಾಂತ ಕಂಬಳಿ, ವಿಜಯಕುಮಾರ್ ನಂದಿಕೋಲ್ಮಠ, ಪೃಥಾ ಪವಾರ ಮುಂತಾದವರು ಉಪಸ್ಥಿತರಿದ್ದರು.



> ರಾಜ್ಯ ಸರ್ಕಾರವು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಸಾರ್ವಜನಿಕ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ಪರಿಚಯಿಸುವ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡಿಸಿದೆ. ಕೆಟಿಟಿಪಿ ಕಾಯ್ದೆಗೆ ಕರ್ನಾಟಕ ಸಚಿವ ಸಂಪುಟ ಕಳೆದ ವಾರ ತಿದ್ದುಪಡಿ ಮಾಡಿ ಅನುಮೋದನೆ ನೀಡಿದ್ದು, ಕೆಟಿಟಿಪಿ ಕಾಯ್ದೆಯಲ್ಲಿನ ತಿದ್ದುಪಡಿಯು ಸಿವಿಲ್ ವರ್ಕ್ ಗುತ್ತಿಗೆಗಳಲ್ಲಿ ಮತ್ತು ಸರಕು–ಸೇವಾ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4 ಮೀಸಲಾತಿಯನ್ನು ಅನುಮತಿಸಲಿದೆ ಎಂದು ವಿ.ಹಿಂ.ಪ ಕಾರ್ಯಕರ್ತರು ಮನವಿಯಲ್ಲಿ ತಿಳಿಸಿದರು.

### ಶಾಸಕ ಜಿ.ಎಸ್. ಪಾಟೀಲರ ಜನ್ಮ ದಿನಾಚರಣೆ ನಿಮಿತ್ತ ವನಮಹೋತ್ಸವ

# ವನಮಹೋತ್ಸವದತ್ತ ಗಮನ ನೀಡಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಸಿಗಳನ್ನು ನೆಟ್ಟು, ಅವುಗಳನ್ನು ಪೋಷಿಸಿ ಬೆಳೆಸುವದರಿಂದ ಜಾಗತಿಕ ತಾಪಮಾನ ಕಡಿಮೆಯಾಗುತ್ತದೆ. ಆದ್ದರಿಂದ ಎಲ್ಲರೂ ವನಮಹೋತ್ಸವದತ್ತ ಗಮನ ಹರಿಸಬೇಕೆಂದು ಕರ್ನಾಟಕ ಕಾಂಗ್ರೆಸ್ ಯುವ ಘಟಕದ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಕಾಂಗ್ರೆಸ್ ಘಟಕದ ಆಶ್ರಯದಲ್ಲಿ ಪ್ರಾಥಮಿಕ ಪತ್ತಿನ ಸಹಕಾರಿ ಸಂಘದಲ್ಲಿ ನಡೆದ ರೋಣ ಶಾಸಕ ಜಿ.ಎಸ್. ಪಾಟೀಲರ ಜನ್ಮ ದಿನಾಚರಣೆ ನಿಮಿತ್ತ ಸಸಿ ನೆಡುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದಿನದಿಂದ ದಿನಕ್ಕೆ ಜಗತ್ತಿನ ತಾಪಮಾನ ಹೆಚ್ಚಾಗುತ್ತಿದ್ದು, ಭೂಮಿಯ ಮೇಲೆ ಬದುಕುವುದೇ ದುಸ್ತರವಾಗುತ್ತಿದೆ. ಶಾಸಕ ಜಿ.ಎಸ್. ಪಾಟೀಲರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಅವರ ಎಲ್ಲ ಅಭಿಮಾನಿಗಳು ವನಮಹೋತ್ಸವಕ್ಕೆ ಮುಂದಾಗಿ ಸಸಿ ನೆಡುವ ಕಾರ್ಯವನ್ನು ಹಮ್ಮಿಕೊಂಡಿದ್ದು ಸ್ತುತ್ಯಾರ್ಹ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಗುರುನಾಥ ಅವರೆಡ್ಡಿ ಮಾತನಾಡಿ, ನಮ್ಮ ನಾಯಕರಾದ ಜಿ.ಎಸ್. ಪಾಟೀಲರ ಜನ್ಮ ದಿನಾಚರಣೆಯನ್ನು ವನಮಹೋತ್ಸವದ ಮೂಲಕ ಅರ್ಥಪೂರ್ಣವಾಗಿ ಆಚರಿಸುತ್ತಿರುವುದು ಸಂತಸ ತಂದಿದೆ. ಸಸಿ ನೆಟ್ಟರೆ ಸಾಲದು, ಅವುಗಳ ಪೋಷಣೆ ಮಾಡುವುದರಿಂದ ಜಾಗತಿಕ ತಾಪಮಾನ ಕಡಿಮೆಯಾಗುತ್ತದೆ, ಮಣ್ಣು ಸವಕಳಿಯನ್ನು ತಡೆಯುತ್ತದೆ, ನಮಗೆ ನೆರಳು ಮತ್ತು ಫಲಗಳನ್ನು ಕೊಡುತ್ತದೆ. ಈ ಎಲ್ಲ ಕಾರಣಗಳಿಂದ ನಾವು ಮರಗಿಡಗಳನ್ನು ಕಡಿಯುವ ಬದಲಾಗಿ ಬೆಳೆಸುವತ್ತ ಗಮನ ಹರಿಸಬೇಕೆಂದರು.

ಈ ಸಂದರ್ಭದಲ್ಲಿ ಬಸವರಾಜ ಪಲ್ಲೇದ, ಅಜ್ಜಪ್ಪಗೌಡ ಪಾಟೀಲ, ಸುರೇಶ ಶಿರೋಳ, ಮಲ್ಲಣ್ಣ ಕಲ್ಲೇಶ್ಯಾಣಿ, ದೇವೇಂದ್ರ ಮುನೇನಕೊಪ್ಪ, ಎ.ಕೆ. ಮಳಗಿ, ಮಳ್ಳಪ್ಪ ದ್ಯಾಸಲ, ಬಾಬುಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು. ಅಂದಪ್ಪ ವೀರಾಪೂರ ನಿರೂಪಿಸಿ, ವಂದಿಸಿದರು.



### ಸಾಮಾನ್ಯ ಪ್ರವೇಶ ಪರೀಕ್ಷೆಯ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ಪರೀಕ್ಷೆಗಳು ಸುಗಮವಾಗಿ ಜರುಗಿಸಲು ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಎಪ್ರಿಲ್ 16 ಮತ್ತು 17ರಂದು ಜರುಗುವ ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ಕುರಿತು ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಸಮಯದಲ್ಲಿ ಯಾವುದೇ ಅಕ್ರಮ, ಅವ್ಯವಹಾರ, ಲೋಪದೋಷಗಳಾಗದಂತೆ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಿದ ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ಶಿಸ್ತು ಮತ್ತು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ನಿರ್ದೇಶನ ನೀಡಿದರು.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 16 ಮತ್ತು 17ರಂದು ಬೆಳಿಗ್ಗೆ 8.30ರಿಂದ ಸಂಜೆ 5 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝುರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಜಿಲ್ಲೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಯಾವುದೇ ಅಕ್ರಮಕ್ಕೆ ಆಸ್ಪದ ನೀಡದೇ ಪಾರದರ್ಶಕವಾಗಿ ಜರುಗಿಸಬೇಕೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಪರೀಕ್ಷೆಯಲ್ಲಿ ಸಮಯ ಪರಿಪಾಲನೆ ಬಹಳ ಮುಖ್ಯವಾಗಿದ್ದು, ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿ ಗೋಡೆ ಗಡಿಯಾರಗಳು ಇರುವಂತೆ ನೋಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಸಿ.ಸಿ ಟಿವಿ ಅಳವಡಿಕೆ, ಅಗತ್ಯ ಬಂದೋಬಸ್ತ್ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಆರ್.ಎಸ್. ಬುರುಡಿ, ಡಯಟ್ ಪ್ರಾಂಶುಪಾಲರಾದ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.



> ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿಕೊಂಡು ತೆಗೆದುಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಮೊಬೈಲ್ ಫೋನ್, ಬ್ಲೂಟೂಥ್, ಸ್ಲೈಡ್ ರೂಲ್ಸ್, ಕ್ಯಾಲ್‌ಕ್ಯುಲೇಟರ್, ವೈಟ್ ಫ್ಲುಯಿಡ್, ವೈರ್‌ಲೆಸ್ ಸೆಟ್ಸ್, ಪೇಪರ್ ಚೀಟಿ, ಪುಸ್ತಕ ಇತ್ಯಾದಿಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

> ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಮಾತನಾಡಿ, ಜಿಲ್ಲೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು 13 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿವೆ. 3615 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆ ಸುಗಮವಾಗಿ ಜರುಗಲು ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

## ಸಾಕ್ಷಿ ಸುಭಾಷಿತ

ಯಾವ ಸ್ನೇಹದ ಪ್ರಯಾಣ ಎಲ್ಲಿಯವರೆಗೆ ಎಂದು ಯಾರಿಗೂ ತಿಳಿದಿಲ್ಲ. ಆದರೆ ದಿನಕ್ಕೊಂದು ಶುಭಾಶಯ ಆ ಸ್ನೇಹಕ್ಕೆ ಜೀವ ತುಂಬುತ್ತದೆ.

–ಸುಭಾಷಿತ

## ಸಂಪಾದಕೀಯ

# ಭ್ರಷ್ಟಾಚಾರದಲ್ಲಿ ಕರ್ನಾಟಕ ನಂಬರ್ 1

ಕರ್ನಾಟಕ ಇಡೀ ದೇಶದಲ್ಲಿ ಭ್ರಷ್ಟಾಚಾರದಲ್ಲಿ ನಂಬರ್ ಒನ್ ಆಗಿದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಹಾಗೂ ಶಾಸಕ ಬಸವರಾಜ ರಾಯರೆಡ್ಡಿ ನೀಡಿರುವ ಹೇಳಿಕೆ ಚರ್ಚೆಗೆ ಗ್ರಾಸವಾಗಿದೆ. ರಾಯರೆಡ್ಡಿ ಹೇಳಿಕೆ ವಿವಾದಕ್ಕಿಂತ ವಾಸ್ತವದ ಪ್ರತಿಬಿಂಬವಾಗಿ ನೋಡುವ ಮನಸ್ಥಿತಿ ಬೆಳೆಸಿಕೊಳ್ಳಬೇಕಿದೆ.

ರಾಜ್ಯದಲ್ಲಿ ಯಾವುದೇ ಪಕ್ಷ ಅಧಿಕಾರದಲ್ಲಿರಲಿ. ಆದರೆ ಭ್ರಷ್ಟಾಚಾರ ಮಾತ್ರ ನಿತ್ಯ ನಿರಂತರವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ ಭ್ರಷ್ಟಾಚಾರ ನಿಯಂತ್ರಣ ಮಾಡಲು ಸಾಧ್ಯವಾಗಿಲ್ಲ ಎಂದು ರಾಯರೆಡ್ಡಿ ಒಪ್ಪಿಕೊಂಡಿರುವುದು ಸ್ವಾಗತಾರ್ಹವೇ.

ಆದರೆ ಭವಿಷ್ಯದಲ್ಲಿ ಭ್ರಷ್ಟಾಚಾರ ನಿಯಂತ್ರಣಕ್ಕೆ ರಾಜ್ಯ ಸರಕಾರ ಯಾವೆಲ್ಲಾ ಕ್ರಮಗಳನ್ನು ಕೈಗೊಂಡಿದೆ ಎನ್ನುವ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ. ರಾಜ್ಯದಲ್ಲಿ ಸರಕಾರಿ ನೌಕರರು ಮಾತ್ರವಲ್ಲದೆ ಸಾರ್ವಜನಿಕ ವಲಯದಲ್ಲಿ ಭ್ರಷ್ಟಾಚಾರ ಮಿತಿಮೀರಿದೆ. ಆದರೆ ಸರಕಾರ ಅದನ್ನು ನಿಯಂತ್ರಿಸುವ ನಿಟ್ಟಿನಲ್ಲೂ ಕ್ರಮ ಕೈಗೊಳ್ಳಬೇಕಲ್ಲವೇ?

ಅದರಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ರಾಯ–ರೆಡ್ಡಿ ಆ ವಿಷಯದಲ್ಲೂ ಸರಕಾರಕ್ಕೆ ಸಲಹೆ ನೀಡಬೇಕಿತ್ತು. ಆ ಸಲಹೆಯನ್ನು ಬಹಿರಂಗವಾಗಿ ಹೇಳಬೇಕಿತ್ತು. ಅದನ್ನು ಬಿಟ್ಟು ಕೇವಲ ಭ್ರಷ್ಟಾಚಾರ ನಿಂತಿಲ್ಲ ಎನ್ನುವ ಸತ್ಯ ಒಪ್ಪಿಕೊಂಡರೆ, ಅವರ ಆತ್ಮಸಾಕ್ಷಿಗೆ ನಮನ ಸಲ್ಲಿಸಬಹುದೇ ಹೊರತು, ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಿಲ್ಲ.

ಭ್ರಷ್ಟಾಚಾರ ನಿಯಂತ್ರಣ ವಿಷಯದಲ್ಲಿ ಸರಕಾರ ಬದ್ಧತೆ ಪ್ರದರ್ಶಿಸುತ್ತಿಲ್ಲ. ಸರ್ಕಾರ ಗ್ಯಾರಂಟಿ ಕಾರ್ಯಕ್ರಮಗಳು ಹಾಗೂ ಬಡವರ ಕಲ್ಯಾಣಕ್ಕೆ ಅನೇಕ ಕಾರ್ಯಕ್ರಮಗಳನ್ನು ಕೊಟ್ಟಿದೆ, ಆದರೆ ಭ್ರಷ್ಟಾಚಾರ ನಿಯಂತ್ರಣ ವಿಷಯದಲ್ಲಿ ಯಾವುದೇ ಉಪಕ್ರಮಗಳನ್ನು ಕೈಗೊಂಡಿಲ್ಲ. ಭವಿಷ್ಯದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಚಿಂತನೆ ನಡೆಸಲಿ.

### 36ನೇ ರಾಷ್ಟ್ರೀಯ ಭೂಮಾಪನ ದಿನದ ನಿಮಿತ್ತ ವಿಶೇಷ ಲೇಖನ

# ಭೂ ಮಾಪಕನ ಕೈಯಲ್ಲಿ ಭೂಮಿಯ ಅಳತೆ!

ಎಪ್ರಿಲ್ 10 ಭೂಮಾಪನ ಕ್ಷೇತ್ರದ ಮಹತ್ವದ ದಿನ. ಭೂಮಾಪನವು (Surveying) ಮಾನವ ನಾಗರಿಕತೆಯ ಪ್ರಗತಿಯಲ್ಲಿ ಅತ್ಯಗತ್ಯವಾದ ಕ್ಷೇತ್ರವಾಗಿದೆ. ಭೂಮಿಯ ಅಳತೆ, (ಗಡಿ) ಸೀಮಾರೇಖೆಗಳನ್ನು ನಿರ್ಧರಿಸುವುದು, ಭೂಮಿಯ ಭೌಗೋಳಿಕ ಮತ್ತು ಭೌತಿಕ ಲಕ್ಷಣಗಳನ್ನು ಅಧ್ಯಯನ ಮಾಡುವ ಕಾರ್ಯದಲ್ಲಿ ಭೂಮಾಪನ ವಿಜ್ಞಾನ ಪ್ರಮುಖ ಪಾತ್ರ ವಹಿಸುತ್ತಿದೆ. ಈ ಕ್ಷೇತ್ರದ ಮಹತ್ವವನ್ನು ಗುರುತಿಸಿ, ರಾಷ್ಟ್ರೀಯ ಭೂಮಾಪನ ದಿನಾಚರಣೆಯನ್ನು ಆಚರಿಸಲಾಗುತ್ತದೆ.



ಭಾರತದಲ್ಲಿ ಭೂಮಾಪನದ ಪ್ರಮುಖ ಸಂಸ್ಥೆಯಾದ "ಖಣಡಿತಜಥಿ ಠಜಿ ಖಟಿಜುಚ" ಸಂಸ್ಥೆಯು 1767ರಲ್ಲಿ ಸ್ಥಾಪನೆಯಾಯಿತು. ಈ ಸಂಸ್ಥೆಯು ಭಾರತ ದೇಶದ ಭೌಗೋಳಿಕ ನಕ್ಷೆಗಳನ್ನು ಸಿದ್ಧಪಡಿಸುವ ಕಾರ್ಯದಲ್ಲಿ ಪ್ರಮುಖ ಪಾತ್ರ ವಹಿಸಿದೆ. ಭೂಮಾಪನ ತಂತ್ರಜ್ಞಾನ, ಉಪಗ್ರಹ ಭೂಮಾಪನ, ಜಿಪಿಎಸ್ (ಉಕಖ), ಜಿಐಎಸ್ (ಉಖಖ) ಮತ್ತು ಲಿಡಾರ್ (ಖಐಆಂಖ) ಪದ್ಧತಿಗಳನ್ನು ಬಳಸಿಕೊಂಡು, ಈ ಕ್ಷೇತ್ರ ನಿರಂತರವಾಗಿ ಅಭಿವೃದ್ಧಿ ಹೊಂದುತ್ತಿದೆ.

ಭಾರತದ ಹಲವಾರು ಭೌಗೋಳಿಕ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ತಾಂತ್ರಿಕ ಸಂಸ್ಥೆಗಳು ಈ ದಿನವನ್ನು ವಿಶೇಷ ಉಪನ್ಯಾಸಗಳು, ಕಾರ್ಯಾಗಾರಗಳು, ಪ್ರದರ್ಶನಗಳು ಮತ್ತು ಡಿಜಿಟಲ್ ತಂತ್ರಜ್ಞಾನಗಳ ಪರಿಚಯದ ಮೂಲಕ ಆಚರಿಸುತ್ತವೆ. ಭೂಮಾಪನ ಕ್ಷೇತ್ರದ ವಿದ್ವಾಂಸರು, ತಜ್ಞರು ಮತ್ತು ವಿದ್ಯಾರ್ಥಿಗಳು ಈ ದಿನದ ಮೂಲಕ ತಮ್ಮ ಸಾಧನೆಗಳನ್ನು ಹಂಚಿಕೊಳ್ಳುತ್ತಾರೆ.

ಡಿಜಿಟಲ್ ತಂತ್ರಜ್ಞಾನ, ಆರ್ಥೋಫೋಟೋಗ್ರಫಿ, ಡ್ರೋನ್ ಭೂಮಾಪನ, 3ಆ ಮಾದರಿಗಳನ್ನು ಬಳಸಿಕೊಂಡು ಭೂಮಾಪನ ಕ್ಷೇತ್ರ ಭವಿಷ್ಯದಲ್ಲಿ ಇನ್ನಷ್ಟು ಉನ್ನತ ಮಟ್ಟಕ್ಕೆ ಸೇರುವ ಸಾಧ್ಯತೆಗಳಿವೆ. ಜಮೀನಿನ ಮರುಗೋಳಿಕೆ (Re-Survey) ಮತ್ತು ಗಡಿ ನಿರ್ಧಾರ–ಭೂಮಿಯ ಗಡಿ ವಿವಾದಗಳನ್ನು ಪರಿಹರಿಸಲು ಮತ್ತು ಸರಿಯಾದ ಅಳತೆಗಳನ್ನು ಒದಗಿಸಲು ಭೂಮಾಪಕರು ಸಹಾಯ ಮಾಡುತ್ತಾರೆ.

ಭೂಹದ್ದಿನ ದಾಖಲೆ (Land Records) ಮತ್ತು ಮ್ಯಾಪಿಂಗ್–ನಕ್ಷೆಗಳನ್ನು ತಯಾರಿಸುವುದು, ಸರ್ವೇ ಸಂಖ್ಯೆಗಳನ್ನು ನವೀಕರಿಸುವುದು, ಗ್ರಾಮ ಮತ್ತು ನಗರ ಯೋಜನೆ–ಸ್ಮಾರ್ಟ್ ಸಿಟಿ ಯೋಜನೆ, ರಸ್ತೆ, ಇಮಾರತಿಗಳ ಸ್ಥಾಪನೆಗೆ ಅಗತ್ಯ ಭೂಮಾಪನ ಕಾರ್ಯ ನಿರ್ವಹಣೆ, ಮನೆಯ ಪ್ಲಾಟ್ ಅಳತೆ ಮತ್ತು ಮಂಜೂರು ಪ್ರಕ್ರಿಯೆ–ಬಿಳಿಯ ಹಣ್ಣು (White Plot) ಮತ್ತು ಕಡಿತ ನೀಲಿ ಹಣ್ಣು (Blue Plot) ದೃಢೀಕರಣ, ಕಾನೂನು ಮತ್ತು ಸರಕಾರಿ ಯೋಜನೆಗಳು–ಭೂಮಿ ಬದಲಾವಣೆ, ಕಡತ ಪ್ರಕ್ರಿಯೆಗಳಿಗೆ ಅಗತ್ಯವಾದ ಭೂಮಾಪನ ವರದಿ ನೀಡುವುದು ಭೂಮಾಪಕರ ಕಾರ್ಯವ್ಯಾಪ್ತಿಯಾಗಿದೆ.

**ಭೂಮಾಪನದ ಮಹತ್ವ :**

1. ಆಸ್ತಿಯ ನಿರ್ಧಾರ – ಭೂಮಿ ಸ್ವಾಮ್ಯ ನಿರ್ಧಾರ, ಮರುಹಂಚಿಕೆ ಮತ್ತು ಸೀಮಾರೇಖೆಗಳನ್ನು ಗುರುತಿಸಲು ಭೂಮಾಪನ ಮುಖ್ಯವಾಗಿದೆ.
2. ಪರಿವೇಶ ನಿರ್ವಹಣೆ – ಪರಿಸರ ಸಂರಕ್ಷಣೆ, ನದಿ ಕೋಸಗಳು, ಕಾಡು ಸಂರಕ್ಷಣೆ ಮುಂತಾದ ಕಾರ್ಯಗಳಲ್ಲಿ ನೆರವು ನೀಡುತ್ತದೆ.
3. ಅಧುನಿಕ ನಗರ ಯೋಜನೆ – ರಸ್ತೆಗಳು, ಸೇತುವೆಗಳು, ಕಟ್ಟಡಗಳು, ರೈಲು ಮಾರ್ಗಗಳು ಮುಂತಾದ ಮೂಲಸೌಕರ್ಯ ಯೋಜನೆಗೆ ನೆರವಾಗುತ್ತದೆ.
4. ರಕ್ಷಣಾ ಮತ್ತು ಭದ್ರತಾ ವಲಯ – ಸೇನಾ ತಂತ್ರಜ್ಞಾನ, ಭೂಗೋಳೀಯ ಗಡಿಗಳು ನಿರ್ಧರಿಸಲು ಮತ್ತು ಭದ್ರತಾ ಉದ್ದೇಶಗಳಿಗೆ ಸಹಾಯಕವಾಗಿದೆ.

ರಾಷ್ಟ್ರೀಯ ಭೂಮಾಪನ ದಿನವು ಭೂಮಾಪನ ತಂತ್ರಜ್ಞಾನ, ಅದರ ಪ್ರಗತಿ ಮತ್ತು ಮಹತ್ವವನ್ನು ಒತ್ತಿ ಹೇಳುವ ದಿನವಾಗಿದೆ. ಭೂಮಾಪನದ ಸಹಾಯದಿಂದ ದೇಶದ ಭೌಗೋಳಿಕ ನಿರ್ವಹಣೆ ಸುಗಮವಾಗುತ್ತಿದ್ದು, ಭವಿಷ್ಯದಲ್ಲಿ ಮತ್ತಷ್ಟು ಆಧುನಿಕ ಪದ್ಧತಿಗಳನ್ನು ಅಳವಡಿಸಿಕೊಂಡು ಈ ಕ್ಷೇತ್ರದಲ್ಲಿ ಅಭಿವೃದ್ಧಿ ಸಾಧಿಸಲು ಸಾಧ್ಯವಿದೆ. ನಾವು ಭೂಮಿಯನ್ನು ಸರಿಯಾಗಿ ಅರ್ಥಮಾಡಿಕೊಂಡಾಗ ಮಾತ್ರ, ನಮ್ಮ ಭವಿಷ್ಯವನ್ನು ಸುಧಾರಿಸಬಹುದು.

ಮೊದಲ ಬಾರಿಗೆ ರಾಷ್ಟ್ರದಲ್ಲಿ ಕರ್ನಾಟಕ ಸರ್ಕಾರ, ಕಂದಾಯ ಸಚಿವ ವಿ.ಸೋಮಶೇಖರ್ ನೇತೃತ್ವದಲ್ಲಿ ಹಾಗೂ ಆಗಿನ ಭೂ–ಮಾಪನ ಇಲಾಖೆಯ ಆಯುಕ್ತರಾದ ರಾಜೀವ್ ಚಾವ್ಲಾ ಸಹಕಾರದಿಂದಿಗೆ 2000ನೇ ಇಸ್ವಿಯಲ್ಲಿ ಪರವಾನಿಗೆ ಭೂಮಾಪಕರ ಆಯ್ಕೆ ಶುರು ಮಾಡಲಾಯಿತು. ಅದರ ಮುಂಚೆ ಕುಂಠಿತಗೊಂಡಿದ್ದ ಭೂ–ಮಾಪನ ಕಾರ್ಯಕ್ಕೆ ಪರವಾನಿಗೆ ಭೂ–ಮಾಪಕರು ಈಗಿನ ವೇಗಗತಿಗೆ ಕಾರಣರಾಗಿದ್ದಾರೆ. ವರ್ಷಾನುಗಟ್ಟಲೆ ಕಾಯಬೇಕಿದ್ದ ರೈತರು ಈಗ ಒಂದು ತಿಂಗಳಲ್ಲಿಯೇ ತಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ನೆರವಾಗಿದ್ದಾರೆ. ಇಂತಹ ಪರವಾನಿಗೆ ಭೂ–ಮಾಪಕರ ಕುಂದು ಕೊರತೆಗಳಿಗೆ ಈಗಿನ ಸರಕಾರ ಮಹತ್ತರದ ನಿರ್ಧಾರದ ಮೂಲಕ ನೆರವಾಗಲೆಂದು ನಾವೆಲ್ಲರು ಆಶಿಸೋಣ.



– ಎಂ.ಎಂ. ಮಾಳಗಿಮನಿ.
ಭೂಮಾಪಕರು, ಗದಗ.

### ವಕ್ಫ್ ಕಾಯ್ದೆ ಜಾರಿಗೆ ತರುವುದಿಲ್ಲ– ಮಮತಾ ಬ್ಯಾನರ್ಜಿ

# ಬಂಗಾಳವನ್ನು ಒಡೆದು ಆಳುವುದಕ್ಕೆ ಸಾಧ್ಯವಿಲ್ಲ

**■ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ**

ರಾಜ್ಯದಲ್ಲಿ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ಜಾರಿಗೆ ತರಲಾಗುವುದಿಲ್ಲ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬುಧವಾರ ಹೇಳಿದ್ದಾರೆ. ಕೋಲ್ಕತ್ತಾದಲ್ಲಿ ಜೈನ ಸಮುದಾಯದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಬ್ಯಾನರ್ಜಿ, ಅಲ್ಪಸಂಖ್ಯಾತರು ಮತ್ತು ಅವರ ಆಸ್ತಿಯನ್ನು ರಕ್ಷಿಸುವುದಾಗಿ ಹೇಳಿದರು.

"ವಕ್ಫ್ ಕಾಯ್ದೆ ಜಾರಿಗೆ ಬಂದಿರುವುದರಿಂದ ನೀವು ನೊಂದಿದ್ದೀರಿ ಎಂದು ನನಗೆ ತಿಳಿದಿದೆ. ನಂಬಿಕೆಯಿಡಿ, ಬಂಗಾಳದಲ್ಲಿ ಒಡೆದು ಆಳುವಂತಹದ್ದು ಏನೂ ಆಗುವುದಿಲ್ಲ" ಎಂದು ಅವರು ಭರವಸೆ ನೀಡಿದರು.

ವಕ್ಫ್ ಕಾಯ್ದೆ ಜಾರಿಗೆ ಬಂದಿರುವುದರಿಂದ ನೀವು ನೊಂದಿದ್ದೀರಿ ಎಂದು ನನಗೆ ತಿಳಿದಿದೆ. ನಂಬಿಕೆಯಿಡಿ, ಬಂಗಾಳದಲ್ಲಿ ಒಡೆದು ಆಳುವ ಯಾವುದೇ ಘಟನೆ ನಡೆಯುವುದಿಲ್ಲ. ಎಲ್ಲರೂ ಒಟ್ಟಿಗೆ ಇರಬೇಕು ಎಂಬ ಸಂದೇಶವನ್ನು ನೀವು ರವಾನಿಸುತ್ತೀರಿ" ಎಂದು ಮಮತಾ ಬ್ಯಾನರ್ಜಿ ಹೇಳಿದರು.

ರಾಜಕೀಯ ಚಳುವಳಿಯನ್ನು ಪ್ರಾರಂಭಿಸಲು ಜನರನ್ನು ಪ್ರಚೋದಿಸುವವರಿಗೆ ಕಿವಿಗೊಡಬೇಡಿ ಎಂದು ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಜನರಿಗೆ ಮನವಿ ಮಾಡಿದರು.

### ರಸಗೊಬ್ಬರ ಅಭಾವ ಉಂಟಾಗದಂತೆ ಕ್ರಮ ಕೈಗೊಳ್ಳಲು ಸೂಚನೆ

# ಪಿ.ಓ.ಎಸ್ ಮುಖಾಂತರವೇ ರಸಗೊಬ್ಬರ ವಿತರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

2025–26ನೇ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ರಸಗೊಬ್ಬರದ ಬೇಡಿಕೆ ಹೆಚ್ಚಾಗಿರುವುದರಿಂದ ಜಿಲ್ಲೆಗೆ ಸರಬರಾಜಾಗುವ ರಸಗೊಬ್ಬರವನ್ನು ಕ್ರಮಬದ್ಧವಾಗಿ ಉಸ್ತುವಾರಿ ಮಾಡಿ ರೈತರಿಗೆ ಸಕಾಲದಲ್ಲಿ ದೊರಕುವಂತೆ ವ್ಯವಸ್ಥೆ ಮಾಡಬೇಕಾಗಿದೆ. ಆದ್ದರಿಂದ ರಸಗೊಬ್ಬರ ಅಭಾವ ಉಂಟಾಗದಂತೆ ಜಿಲ್ಲೆಯ ರಸಗೊಬ್ಬರ ಮಾರಾಟಗಾರರು ಕ್ರಮ ಕೈಗೊಳ್ಳಬೇಕೆಂದು ಗದಗ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ರಸಗೊಬ್ಬರವು ಅಗತ್ಯ ವಸ್ತುಗಳ ಕಾಯ್ದೆ ಹಾಗೂ ರಸಗೊಬ್ಬರ ನಿಯಂತ್ರಣ ಕಾಯ್ದೆಯಡಿ 1985 ಬರುವುದರಿಂದ ಯೂರಿಯಾ ಹಾಗೂ ಡಿ.ಎ.ಪಿ ರಸಗೊಬ್ಬರಗಳ ಸಮರ್ಪಕ ಸರಬರಾಜು ಹಾಗೂ ನಿರ್ವಹಣೆ ಮಾಡಲು ಜಿಲ್ಲೆಯ ಎಲ್ಲಾ ರಸಗೊಬ್ಬರ ಸಗಟು ಹಾಗೂ ಚಿಲ್ಲರೆ ಮಾರಾಟಗಾರರು ಸೂಕ್ತ ವ್ಯವಸ್ಥೆಗಳನ್ನು ಮಾಡಿಕೊಳ್ಳುವುದು. ತಮ್ಮ ಮಳಿಗೆಯಲ್ಲಿ ದಾಸ್ತಾನು ಮಾಡಲಾಗಿರುವ ರಸಗೊಬ್ಬರಗಳನ್ನು ಕಡ್ಡಾಯವಾಗಿ ಪಿ.ಓ.ಎಸ್. (ಪಾಯಿಂಟ್ ಆಫ್ ಸೇಲ್) ಮುಖಾಂತರವೇ ರೈತರಿಗೆ ವಿತರಣೆ ಮಾಡುವುದು. ತಪ್ಪಿದ್ದಲ್ಲಿ ಸಂಬಂಧಿಸಿದ ರಸಗೊಬ್ಬರ ಮಾರಾಟಗಾರರ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು ಹಾಗೂ ಲೈಸನ್ಸ್‌ನ್ನು ರದ್ದು ಪಡಿಸಲಾಗುವುದು.




ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಬಳಕೆಯಿಂದ ಎಣ್ಣೆ ಕಾಳು ಬೆಳೆಗಳಲ್ಲಿ ಕಾಳಿನ ಗಾತ್ರ ಹೆಚ್ಚಾಗಿ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ಪೊಟ್ಯಾಷ್ ಒದಗಿಸುವ ಇತರೆ ಸಂಯುತ ರಸಗೊಬ್ಬರಗಳಾದ 15:15:15, 10:26:26, 22:22:11, 14:35:14, 17:17:17, 14:28:14, 19:19:19, 20:10:10, 9:24:24, 8:21:21 ಮತ್ತು 24:24:0 ಇತ್ಯಾದಿ ಕಾಂಪ್ಲೆಕ್ಸ್ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ ಎಂದು ರೈತ ಬಾಂಧವರಲ್ಲಿ ವಿನಂತಿಸಲಾಗಿದೆ.

ಐ.ಎಫ್.ಎಮ್.ಎಸ್. ತಂತ್ರಾಂಶದಲ್ಲಿ ಬಾಕಿ ಇರುವ ರಸಗೊಬ್ಬರಗಳ ಆಧಾರದ ಮೇಲೆ ಕೇಂದ್ರದಿಂದ ಜಿಲ್ಲೆಗೆ ರಸಗೊಬ್ಬರವನ್ನು ಹಂಚಿಕೆ ಮಾಡುವುದರಿಂದ ನಿಯಮಿತವಾಗಿ ಪಿ.ಓ.ಎಸ್. ಮುಖಾಂತರವೇ ವಿತರಣೆ ಮಾಡುವುದು ಹಾಗೂ ಭೌತಿಕ ದಾಸ್ತಾನು ಪಿ.ಓ.ಎಸ್‌ನಲ್ಲಿ ನಮೂದಿಸಿದ ದಾಸ್ತಾನು ತಾಳೆ ಆಗುವಂತೆ ಕ್ರಮ ಜರುಗಿಸುವುದು. ಪಿ.ಓ.ಎಸ್‌ನಲ್ಲಿ ಹೆಚ್ಚಿನ ಪ್ರಮಾಣದ ದಾಸ್ತಾನು ಉಳಿದಿದ್ದಲ್ಲಿ ಕೇಂದ್ರದಿಂದ ಜಿಲ್ಲೆಗೆ ರಸಗೊಬ್ಬರ ಬೇಡಿಕೆಯಂತೆ ಹಂಚಿಕೆ ಆಗುವುದಿಲ್ಲ ಹಾಗೂ ಜಿಲ್ಲೆಯಲ್ಲಿ ರಸಗೊಬ್ಬರದ ಬಿಕ್ಕಟ್ಟು ಉಂಟಾದಲ್ಲಿ ನಿರ್ವಹಿಸಲು ಕಷ್ಟವಾಗುತ್ತದೆ.

ಆದ್ದರಿಂದ ಪಿ.ಓ.ಎಸ್. ಹಾಗೂ ಭೌತಿಕ ದಾಸ್ತಾನು ತಾಳೆ ಆಗುವಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಗದಗ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಕೋಟೆ ವೀರಭದ್ರೇಶ್ವರ ರಥೋತ್ಸವ ಸಂಪನ್ನ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಕೋಟೆ ವೀರಭದ್ರೇಶ್ವರ ರಥೋತ್ಸವವವು ಸುರಿಯುತ್ತಿರುವ ಮಳೆಯ ನಡುವೆಯೂ ಸಾವಿರಾರು ಭಕ್ತಾಧಿಗಳ ಮಧ್ಯೆ ಸಂಭ್ರಮದಿಂದ ಜರುಗಿತು.

ದೇವಸ್ಥಾನದಿಂದ ದಾನ ಚಿಂತಾಮಣಿ ಅತ್ತಿಮಬ್ಬೆ ಮಹಾದ್ವಾರದವರೆಗೂ ಸಾಗಿದ ರಥವನ್ನು ಸುರಿಯುತ್ತಿರುವ ಮಳೆಯ ನಡುವೆಯೂ ಯುವಕರು ಭಕ್ತಿ ಭಾವದಿಂದ ಎಳೆದರು. ವೀರಭದ್ರೇಶ್ವರ ನಂದಿಕೋಲ ಮೇಳದ ಯುವಕರು ನಂದಿಕೋಲದ ಜತೆ ಕುಣಿಯುತ್ತಿರುವುದು ಭಕ್ತಿಯನ್ನು ಇಮ್ಮಡಿಸಿತು. ಮಳೆ ನಿಂತ ಮೇಲೆ ಗ್ರಾಮದ ಸಾವಿರಾರು ಭಕ್ತಾಧಿಗಳು ಆಗಮಿಸಿ ಹಣ್ಣು ಮತ್ತು ಉತ್ತತ್ತಿಯನ್ನು ಎಸೆದು ತಮ್ಮ ಸಂಕಲ್ಪವನ್ನು ಸಮರ್ಪಿಸಿದರು.

ರಥೋತ್ಸವಕ್ಕೆ ಡೋಣಿಯ ನಂದಿವೇರಿಮಠದ ಶಿವಕುಮಾರ ಸ್ವಾಮಿಗಳು ಧಾರ್ಮಿಕ ವಿಧಿ ವಿದಾನಗಳೊಂದಿಗೆ ಪೂಜೆ ಸಲ್ಲಿಸಿದ ನಂತರ ಚಾಲನೆ ನೀಡಿದರು. ಗ್ರಾಮದ ಅಲ್ಲಮಪ್ರಭುದೇವರ ಮಠದ ಸಿದ್ದಲಿಂಗೇಶ್ವರ ಸ್ವಾಮೀಜಿ, ಮುದಕಯ್ಯ ಪತ್ರಿಮಠ ಸ್ವಾಮಿಗಳು ಉಪಸ್ಥಿತರಿದ್ದರು. ಬೆಳಿಗ್ಗೆ ವೀರಭದ್ರೇಶ್ವರ ದೇವರಿಗೆ ವಿವಿಧ ಹೂವಿನ ಅಲಂಕಾರ, ರುದ್ರಾಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ನಡೆದವು.

# ಅಂಗನವಾಡಿ ಕೇಂದ್ರ ತೆರೆಯಲು ಮನವಿ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ವಾರ್ಡ್ ನಂ. 18ರ ಶ್ರೀ ಸಿದ್ದರಾಮೇಶ್ವರ ನಗರದಲ್ಲಿ ಅಂಗನವಾಡಿ ಕೇಂದ್ರವನ್ನು ತೆರೆಯುವಂತೆ ಆಗ್ರಹಿಸಿ ಕರ್ನಾಟಕ ಯುವ ರಕ್ಷಣಾ ವೇದಿಕೆ ವತಿಯಿಂದ ಸಿಡಿಪಿಓ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ರಿಯಾಜ ತಹಸೀಲದಾರ, ವಾಡ್ ನಂ.18ರಲ್ಲಿ ಅಂಗನವಾಡಿ ಕೇಂದ್ರವಿಲ್ಲದೇ ಇರುವುದರಿಂದ ಬೇರೆ ಬೇರೆ ವಾರ್ಡಿಗೆ ಹೋಗಿ ಬರಲು ಮಕ್ಕಳಿಗೆ ತೊಂದರೆ ಉಂಟಾಗುತ್ತಿದೆ.

ಇದರಿಂದ ಎಷ್ಟೋ ಮಕ್ಕಳು ಅಂಗನವಾಡಿಗೆ ತೆರಳಲು ಹಿಂದೇಟು ಹಾಕುತ್ತಿದ್ದಾರೆ.ಇದರಿಂದ ಮಕ್ಕಳಲ್ಲಿ ಅಪೌಷ್ಠಿಕತೆ, ಅನಾರೋಗ್ಯ ಉಂಟಾಗುತ್ತಿದೆ.

ಮಕ್ಕಳ ಮಾನಸಿಕ ಮತ್ತು ಸಾಮಾಜಿಕ ಬೆಳೆವಣಿಗೆಗೆ ಭದ್ರ ಅಡಿಪಾಯ ಹಾಕಲು ಅಂಗನವಾಡಿ ಕೇಂದ್ರ ಅತೀ ಅವಶ್ಯಕವಾಗಿದೆ. ಆದ್ದರಿಂದ ವಾರ್ಡನಲ್ಲಿ ಹೊಸದಾಗಿ ಅಂಗನವಾಡಿ ಕೇಂದ್ರ ತೆರಯಬೇಕೆಂದು ಮನವಿಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಮೋಹನ ಹೊಂಬಾಳಿ, ಜಾಫರ್ ಅತ್ತಾರ, ಈರಣ್ಣ ಚಿಕ್ಕತೋಟದ ಮುಂತಾದವರು ಉಪಸ್ಥಿತರಿದ್ದರು.

### ಆಶ್ರಯ ನಿವೇಶನ ಯೋಜನೆಯಲ್ಲಿ ಅವ್ಯವಹಾರ ಆರೋಪ । ತನಿಖೆಗೆ ಕರವೇ ಆಗ್ರಹ

# ಭೂಮಿ ಖರೀದಿಯಲ್ಲಿ ಭ್ರಷ್ಟಾಚಾರ?

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆಯಲ್ಲಿ ಬಡವರಿಗಾಗಿ ನೀಡುವ ಉದ್ದೇಶದಿಂದ ಇರುವ ಆಶ್ರಯ ನಿವೇಶನಗಳಿಗಾಗಿ ಭೂಮಿ ಖರೀದಿ ಮತ್ತು ನಿವೇಶನ ಹಂಚಿಕೆಯಲ್ಲಿ ಭ್ರಷ್ಟಾಚಾರ ನಡೆದಿದ್ದು, ಜಿಲ್ಲಾಧಿಕಾರಿಗಳು ಕೂಡಲೇ ಈ ಕುರಿತು ಸಮಗ್ರ ತನಿಖೆ ನಡೆಸಿ ಬಡ ಜನತೆಗೆ ನಿವೇಶನಗಳು ದೊರಕುವಂತೆ ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ(ಪ್ರವೀಣಶೆಟ್ಟಿ ಬಣ)ದ ತಾಲೂಕಾಧ್ಯಕ್ಷ ಮಹೇಶ ಕಲಘಟಗಿ ಆಗ್ರಹಿಸಿದರು.

ಕರವೇ ವತಿಯಿಂದ ಪಟ್ಟಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪಟ್ಟಣದಲ್ಲಿ ಪುರಸಭೆ ಆಡಳಿತ ಮಂಡಳಿಯವರು ಹಲವಾರು ವರ್ಷಗಳಿಂದ ಹೊಂದಾಣಿಕೆ ರಾಜಕೀಯ ಮಾಡಿಕೊಂಡು ಬರುತ್ತಿದ್ದು, ಇಲ್ಲಿ ವಿರೋಧ ಪಕ್ಷವೇ ಇಲ್ಲದಂತಾಗಿದೆ. ಎಲ್ಲರೂ ಸೇರಿ ಪುರಸಭೆಯಲ್ಲಿ ಕೊಳ್ಳೆ ಹೊಡೆಯುತ್ತಿದ್ದಾರೆ ಎಂದು ಆರೋಪಿಸಿದರು.

ಪಟ್ಟಣದ ತಮ್ಮ–ತಿಮ್ಮಿ ಗುಡ್ಡದಲ್ಲಿ ನಿವೇಶನಕ್ಕಾಗಿ ಭೂಮಿ ಖರೀದಿಸಿದ್ದು, ಅಲ್ಲಿ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲ. ಶಿಗ್ಲಿ ರಸ್ತೆಯಲ್ಲಿ 32 ಎಕರೆ 27 ಗುಂಟೆ ಜಮೀನಿನಲ್ಲಿ ಸುಮಾರು 1116 ನಿವೇಶನಗಳನ್ನು ಗುರುತಿಸಿದ್ದು, ಈ ಜಾಗ ವಾಸಕ್ಕೆ ಯೋಗ್ಯವಾಗಿಲ್ಲ. ಆದರೂ ಸಹ ಪುರಸಭೆಯ ಪ್ರಭಾವಿ ಸದಸ್ಯರ ಕೈವಾಡದಿಂದ ಇಂತಹ ಭೂಮಿಗಳನ್ನು ಖರೀದಿಸಲಾಗಿದೆ. ಇಂತಹ ಅನೇಕ ಅವ್ಯವಹಾರಗಳು ಪಟ್ಟಣದ ಪುರಸಭೆಯಲ್ಲಿ ನಡೆದಿದ್ದು, ಬಡವರಿಗೆ ನಿವೇಶನ ದೊರಕಿಸಿಕೊಡುವದಾಗಿ ಕೆಲವರು ಫಲಾನುಭವಿಗಳಿಂದ ಹಣ ಪಡೆದಿರುವ ಬಗ್ಗೆ ನಮ್ಮ ಬಳಿ ದಾಖಲೆಗಳಿವೆ. ಈ ಬಗ್ಗೆ ಕೂಡಲೇ ತನಿಖೆ ಕೈಗೊಂಡು ನಂತರ ನಿವೇಶನಗಳನ್ನು ಅರ್ಹರಿಗೆ ವಿತರಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಈಶ್ವರಗೌಡ ಪಾಟೀಲ, ಮಂಜನಗೌಡ ಪಾಟೀಲ, ವಿರೇಶ ಹಗ್ಗರದ ಹಾಜರಿದ್ದರು.



ಮಂಜುನಾಥ ಗಾಂಜಿ ಮಾತನಾಡಿ, ನಿವೇಶನ ಹಂಚಿಕೆಯಲ್ಲಿ ವಿಳಂಬ ಮಾಡುವದರ ಜೊತೆಗೆ ಪುರಸಭೆ ಕೆಲ ಸದಸ್ಯರು ಫಲಾನುಭವಿಗಳಿಂದ 25–30 ಸಾವಿರ ರೂಗಳನ್ನು ಪಡೆದುಕೊಂಡಿರುವ ಆರೋಪಗಳಿವೆ. ಕೂಡಲೇ ಈ ಕುರಿತಂತೆ ಕ್ರಮ ನಡೆಯದಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಹೋರಾಟಕ್ಕೆ ಮುಂದಾಗುತ್ತೇವೆ ಎಂದು ಹೇಳಿದರು.

## ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಎಪ್ರಿಲ್ 14 ಮತ್ತು 15 ರಂದು ಪ್ರವಾಸ ಕೈಗೊಳ್ಳಲಿದ್ದು, ವಿವರ ಕೆಳಗಿನಂತಿದೆ.

ಎಪ್ರಿಲ್ 14 ರಂದು ಬೆಂಗಳೂರಿನಿಂದ ರಾತ್ರಿ 11 ಗಂಟೆಗೆ ಗದುಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಎಪ್ರಿಲ್ 15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸುವರು. ಸಂಜೆ 4 ಗಂಟೆಗೆ ಗದಗಿನಿಂದ ವಿಜಯಪುರಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಡಾ.ಪ್ರಕಾಶ್ ಜಟ್ಟೆಣ್ಣವರ ಅಮೆರಿಕಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ಎಪ್ರಿಲ್ 15 ರಿಂದ 18 ರವರೆಗೆ ಅಮೇರಿಕಾದ ಲಾಸ್ ವೆಗಾಸ್ ನಲ್ಲಿ ನಡೆಯುವ ವಾರ್ಷಿಕ ಪ್ರಾಣಿ ಕಲ್ಯಾಣ ಸಮ್ಮೇಳನದಲ್ಲಿ ಭಾಗವಹಿಸಲು ಎಚ್ ಐ ಎಸ್ (ಹ್ಯೂಮೇನ್ ಸೊಸೈಟಿ ಇಂಟರ ನ್ಯಾಶನಲ್ ಯುಎಸ್‌ಎ) ರವರ ಅಂತಾರಾಷ್ಟ್ರೀಯ ಪ್ರಾಯೋಜಕತ್ವದಲ್ಲಿ ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಮುಖ್ಯ ಪಶು ವೈದ್ಯಾಧಿಕಾರಿ ಡಾ. ಪ್ರಕಾಶ ಎಸ್ ಜಟ್ಟೆಣ್ಣವರ ಭಾಗವಹಿಸುತ್ತಾರೆ. ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು, ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ವಿದೇಶಿ ಪ್ರವಾಸಕ್ಕೆ ಶುಭ ಹಾರೈಸಿದ್ದಾರೆ.

### ಕುಡಿಯುವ ನೀರಿನ ಸಮಸ್ಯೆ ಕುರಿತ ಸಭೆಯಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ ಸೂಚನೆ

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಬೇಸಿಗೆ ಕಾಲದಲ್ಲಿ ಜನರಿಗೆ ಯಾವುದೇ ರೀತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಶಾಸಕ ಎನ್.ಎಚ್. ಕೋನರಡ್ಡಿ ಹೇಳಿದರು.

ತಾಲೂಕು ಆಡಳಿತ ಸೌಧದ ತಾಲೂಕು ಪಂಚಾಯತ ಸಭಾಭವನದಲ್ಲಿ ಬುಧವಾರ ನಡೆದ

ಕುಡಿಯುವ ನೀರಿನ ಸಮಸ್ಯೆ ಬಗೆಗಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಮಾಹಿತಿ ಪಡೆದುಕೊಂಡು ಸಮಸ್ಯೆ ಇತ್ಯರ್ಥಕ್ಕೆ ಮುಂದಾಗಬೇಕು. ಶುದ್ಧ ಕುಡಿಯುವ ನೀರಿನ ಘಟಕಗಳು ವ್ಯವಸ್ಥಿತ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ಗಮನ ಹರಿಸಬೇಕಾಗಿದೆ. ಗ್ರಾಮಗಳ ಅಭಿವೃದ್ಧಿಯ ಹೊಣೆ ಅಧಿಕಾರಿಗಳ ಮೇಲಿದೆ. ತಹಸೀಲ್ದಾರರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕುರಿತು ಸಮಿತಿ ರಚಿಸಬೇಕು ಎಂದು ಅವರು ತಿಳಿಸಿದರು.

ಅಣ್ಣಿಗೇರಿ ನಗರವು 24*7 ನಿರಂತರ ಕುಡಿಯುವ ನೀರು ಒದಗಿಸುವಲ್ಲಿ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ. ಒರಿಸ್ಸಾದ ಪುರಿ ಮೊದಲ ಸ್ಥಾನವನ್ನು ಪಡೆದುಕೊಂಡಿದೆ. ಅದರಂತೆ ನವಲಗುಂದ ನಗರಕ್ಕೆ 24*7 ಕುಡಿಯುವ ನೀರು ಒದಗಿಸಬೇಕು. ಕುಡಿಯುವ ನೀರಿನಿಂದ ಜನರಿಗೆ ಕಾಯಿಲೆಗಳು ಬರದಂತೆ ಎಚ್ಚರ ವಹಿಸಬೇಕಾಗಿದೆ. ಜಾನುವಾರುಗಳಿಗೆ ಮೇವಿನ ಸಮಸ್ಯೆಯಾಗಬಾರದು. ಕೃಷಿ ಹೊಂಡ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಕೆರೆಗಳ ಸುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಕುಡಿಯುವ ನೀರು ಒದಗಿಸಲು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಬಾರದು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಹುಬ್ಬಳ್ಳಿ ಗ್ರಾಮೀಣ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಿವಾನಂದ ಭೂಮಣ್ಣವರ, ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರರಾದ ಜೆ.ಬಿ. ಮಜ್ಜಗಿ, ನವಲಗುಂದ ತಹಸೀಲ್ದಾರರಾದ ಸುಧೀರ ಸಾಹುಕಾರ, ಅಣ್ಣಿಗೇರಿ ತಹಸೀಲ್ದಾರರಾದ ಎಂ.ಜಿ. ದಾಸಪ್ಪನವರ, ಹುಬ್ಬಳ್ಳಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಯಶವಂತಕುಮಾರ, ನವಲಗುಂದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಭಾಗ್ಯಶ್ರೀ ಜಹಗೀರದಾರ್, ಹೆಸ್ಕಾಂ ಇಲಾಖೆಯ ಎಇಇ ಕಿರಣಕುಮಾರ, ಸಿಪಿಐ ಮುರಗೇಶ ಚನ್ನಣ್ಣವರ, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಗ್ರಾಮ ಪಂಚಾಯಿತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಹಾಜರಿದ್ದರು.



ಕೆರೆಗಳಿಗೆ ಮೀನು ಬಿಟ್ಟು ನೀರನ್ನು ಶುದ್ಧೀಕರಿಸಬೇಕಾಗುತ್ತದೆ. ಜಲ ಜೀವನ ಮಿಷನ್ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗಬೇಕಿದೆ. ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜವಾಬ್ದಾರಿಯನ್ನು ಅಧಿಕಾರಿಗಳು ಹೊಂದಿದ್ದಾರೆ. ಹೀಗಾಗಿ ಯಾವುದೇ ರೀತಿಯಲ್ಲಿ ಅಲಕ್ಷ್ಯ ಮಾಡಬಾರದು ಎಂದು ಶಾಸಕ ಎನ್.ಎಚ್. ಕೋನರಡ್ಡಿ ಅಧಿಕಾರಿಗಳಿಗೆ ಸೂಚಿಸಿದರು.

# ಶೇಂಗಾ ಬೆಳೆ ಕ್ಷೇತ್ರೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಹುಲಕೋಟಿಯ ಐ.ಸಿ.ಎ.ಆರ್–ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ 2024–25ನೇ ಸಾಲಿನ ರಾಷ್ಟ್ರೀಯ ಆಹಾರ ಭದ್ರತೆ ಅಭಿಯಾನದ ಅಡಿ ಗದಗ ಜಿಲ್ಲೆಯ ನಾಗಾವಿ ಗ್ರಾಮದ ಒಟ್ಟು 125 ರೈತರ ಜಮೀನುಗಳಲ್ಲಿ ಬೇಸಿಗೆ ಶೇಂಗಾ ಬೆಳೆಯಲ್ಲಿ ಸಮಗ್ರ ಬೆಳೆ ನಿರ್ವಹಣೆಯ ಪ್ರಾತ್ಯಕ್ಷಿಕೆ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಡಿ, ರಾಜೇಸಾಬ ನದಾಫ್ ಇವರ ಜಮೀನಿನಲ್ಲಿ ಬೇಸಿಗೆ ಶೇಂಗಾ ಬೆಳೆಯ ಕ್ಷೇತ್ರೋತ್ಸವ ಹಾಗೂ ಟ್ರ್ಯಾಕ್ಟರ್ ಚಾಲಿತ ಶೇಂಗಾ ಬಳ್ಳಿ ಕೀಳುವ ಯಂತ್ರದ ಪ್ರಾತ್ಯಕ್ಷಿಕೆಯನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಹಾಯಕ ಕೃಷಿ ಅಧಿಕಾರಿ ಮೇಘನಾ ನಾಡಿಗೇರ, ಬೇಸಿಗೆ ಶೇಂಗಾ ಬೆಳೆಯು ನೀರಾವರಿ ಪ್ರದೇಶದಲ್ಲಿ ಲಾಭದಾಯಕ ಬೆಳೆಯಾಗಿದ್ದು, ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳಿಂದ ರೈತರು ಅಗತ್ಯ ಮಾಹಿತಿ ಪಡೆದು ಹೆಚ್ಚಿನ ಆದಾಯ ಪಡೆಯಬೇಕೆಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ವಿಜ್ಞಾನಿ ಎಸ್.ಕೆ. ಮುದ್ಲಾಪುರ ಮಾತನಾಡಿ, ಶೇಂಗಾ ಬೆಳೆಯಲ್ಲಿ ಬರುವ ಪ್ರಮುಖ ಕೀಟ–ರೋಗಗಳು ಹಾಗೂ ಅವುಗಳ ಸಮಗ್ರ ನಿರ್ವಹಣಾ ಕ್ರಮಗಳನ್ನು ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ. ಮಂಕಣಿ ವಹಿಸಿದ್ದರು.

ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಎನ್.ಎಚ್. ಭಂಡಿ ಮಾತನಾಡಿ, ಬೇಸಿಗೆ ಶೇಂಗಾ ಬೆಳೆಯಲ್ಲಿ ಮಣ್ಣಿನ ಆರೋಗ್ಯದ ಮಹತ್ವ ಹಾಗೂ ಲಘು ಪೋಷಕಾಂಶಗಳ ಉಪಯೋಗದ ಕುರಿತು ವಿವರಿಸಿದರು. ಕೃಷಿ ಇಂಜಿನಿಯರಿಂಗ್ ವಿಜ್ಞಾನಿ ಡಾ. ವಿನಾಯಕ ನಿರಂಜನ್ ಕೂಲಿಯಾಳುಗಳ ಸಮಸ್ಯೆ ನೀಗಿಸಲು ಹಾಗೂ ಸಾಗುವಳಿ ವೆಚ್ಚವನ್ನು ಕಡಿಮೆ ಮಾಡಲು ಯಾಂತ್ರೀಕರಣ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ನಂತರ ಶ್ರೀ ಮಲ್ಲಪ್ಪ ಫಕೀರಪ್ಪ ಗೋಲಪ್ಪನವರ ಇವರ ಜಮೀನಿನಲ್ಲಿ ಟ್ರ್ಯಾಕ್ಟರ್ ಚಾಲಿತ ಶೇಂಗಾ ಬಳ್ಳಿ ಕೀಳುವ ಯಂತ್ರದ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಯಿತು.

### ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ

# ಗುರುವೃಂದಕ್ಕೆ ಕೃತಜ್ಞತಾ ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯ 2005–06ನೇ ಸಾಲಿನ ವಿದ್ಯಾರ್ಥಿಗಳಿಂದ ಅಕ್ಷರದ ಅರಿವು ನೀಡಿದ ಗುರುವೃಂದಕ್ಕೆ ಎಪ್ರಿಲ್ 10ರಂದು ಬೆಳಿಗ್ಗೆ 10.30 ಗಂಟೆಗೆ ಗುರುವಂದನೆ ಕಾರ್ಯಕ್ರಮವನ್ನು ಶಾಲೆಯ ಆವರಣದಲ್ಲಿರುವ ಬಸವರಾಜ ಹೊರಟ್ಟಿ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ನಮ್ಮ ಸನಾತನ ಧರ್ಮ–ಪರಂಪರೆಯಲ್ಲಿ ಗುರುಗಳಿಗೆ ಮಹತ್ವದ ಸ್ಥಾನವಿದೆ. ಅವರನ್ನು ದೇವರಿಗೆ ಸಮನಾಗಿ ಭಕ್ತಿ, ಗೌರವದಿಂದ ಕಾಣಲಾಗುತ್ತದೆ. ಬಾಳಿನಲ್ಲಿ ತಂದೆ–ತಾಯಿಗಿರುವಷ್ಟೇ ಗೌರವವನ್ನು ಗುರುಗಳಿಗೆ ನೀಡಲಾಗುತ್ತದೆ. ಗುರುಗಳು ಶ್ರೇಷ್ಠ ವ್ಯಕ್ತಿತ್ವಗಳ ನಿರ್ಮಾತೃಗಳಾಗಿದ್ದು, ಅವರುಗಳಿಗೆ ಗುರುವಂದನಾ ಕಾರ್ಯಕ್ರಮ ನಡೆಯಲಿದೆ.




ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಸಭಾಪತಿಗಳಾದ ಬಸವರಾಜ ಹೊರಟ್ಟಿ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಾ.ಶಿ. ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ವಹಿಸಲಿದ್ದಾರೆ. ಉದ್ಘಾಟನೆಯನ್ನು ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟೆಪ್ಪನವರ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಲೆಯ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ ಪಾಲ್ಗೊಳ್ಳಲಿದ್ದಾರೆ.

ಬಸವರಾಜ ಹೊರಟ್ಟಿ ದಂಪತಿಗಳು ಶಾಲೆಯನ್ನು ದತ್ತುಪಡೆದು ರಾಜ್ಯದಲ್ಲಿಯೇ ಒಂದು ಮಾದರಿ ಶಾಲೆಯನ್ನಾಗಿ ನಿರ್ಮಿಸುವ ಮೂಲಕ ಶಾಲೆಯ ಕಳೆಯನ್ನು ಹೆಚ್ಚಿಸಿದ್ದಾರೆ. ಆ ದಂಪತಿಗಳಿಗೂ ಹಳೆಯ ವಿದ್ಯಾರ್ಥಿಗಳಿಂದ ಕೃತಜ್ಞತೆಗಳನ್ನು ಸಲ್ಲಿಸುವ ಮೂಲಕ ಗೌರವಿಸಲಾಗುವುದು.

ಗುರುವೃಂದದವರಾದ ಗಂಗಾಧರ ಎಚ್.ಆರ್, ಎಸ್.ಬಿ. ಗೂಳಪ್ಪನವರ, ಎಸ್.ಆರ್. ಹೂಗಾರ, ಎಂ.ವೀರಪ್ಪ, ಎ.ಎಮ್. ಕುಂಟೋಜಿ, ಎಸ್.ಎಸ್. ಕಪ್ಪರದ, ಎಂ.ಪಿ. ಚಿಂಚೇವಾಡಿ, ವ್ಹಿ.ಎಮ್. ಬೂದಿಹಾಳ, ಜೆ.ಬಿ. ಅಣ್ಣಿಗೇರಿ, ವ್ಹಿ.ಬಿ. ತಾಳಿಕೋಟಿ, ಜೆ.ಎ. ಬಾವಿಕಟ್ಟಿ, ಎಸ್.ಆರ್. ಹನಮಗೌಡ್ರ, ಎಸ್.ಆರ್. ಯಲಿಗಾರ, ಗಾಯತ್ರಿ ವಸ್ತ್ರದ, ಎಸ್. ಸುನಿತಾ, ಎಮ್.ಪಿ. ಸಾಂಬ್ರಾಣಿ, ಸಂಗೀತಾ ಪಾಟೀಲ, ಬಸಮ್ಮ ಹೂಗಾರ, ಎಂ.ಐ. ಶಿವನಗೌಡ್ರು, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಶಶಿಕಲಾ ಬಿ.ಗುಳೇದವರ, ಶಾರದಾ ಬಾಣದ, ಸಂಜೀವಿನಿ ಕೂಲಗುಡಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಇವರುಗಳಿಗೆ ಗುರುವಂದನೆ ಸಲ್ಲಿಸಲಾಗುವುದು ಎಂದು 2005–06ನೇ ಸಾಲಿನ ವಿದ್ಯಾರ್ಥಿಗಳು ತಿಳಿಸಿದ್ದಾರೆ.

### ಅಧಿಕಾರಿಗಳೊಂದಿಗೆ ಮೇಲ್ಸೇತುವೆ ಕಾಮಗಾರಿ ವೀಕ್ಷಿಸಿದ ಜಿಲ್ಲಾಧಿಕಾರಿ ದಿವ್ಯಪ್ರಭು

# 4 ತಿಂಗಳು ನಗರ ಸಾರಿಗೆ ನಿಲ್ದಾಣ ಬಂದ್

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ ನಗರದಲ್ಲಿ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ. ಈಗಾಗಲೇ ಶೇ.50ರಷ್ಟು ಕಾಮಗಾರಿ ಮುಕ್ತಾಯಗೊಂಡಿದ್ದು, ಉಳಿದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಎಲ್ಲರ ಸಹಕಾರ ಅವಶ್ಯವಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ಬುಧವಾರ ಹುಬ್ಬಳ್ಳಿ ನಗರದ ಚನ್ನಮ್ಮ ವೃತ್ತ, ಹಳೇ ಕೋರ್ಟ್ ವೃತ್ತ, ಇಂದಿರಾ ಗಾಜಿನ ಮನೆ ವೃತ್ತದಲ್ಲಿ ಪ್ರಗತಿಯಲ್ಲಿರುವ ಮೇಲ್ಸೇತುವೆ ಕಾಮಗಾರಿಯನ್ನು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ, ಸರ್ಕ್ಯೂಟ್ ಹೌಸನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಹುಬ್ಬಳ್ಳಿ ನಗರದಲ್ಲಿ 2022ರಿಂದ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ. ವಿಜಯಪುರ ರಸ್ತೆಯ ಕಡೆಯಿಂದ (710 ಮೀ.), ಗದಗ ರಸ್ತೆಯಿಂದ (700 ಮೀ), ಚೆನ್ನಮ್ಮ ವೃತ್ತದಿಂದ ಹೊಸೂರ ವೃತ್ತದವರೆಗೆ (850 ಮೀ), ಗೋಕುಲ ರಸ್ತೆಯಲ್ಲಿ ಏರ್‌ಪೋರ್ಟ್ ಕಡೆಗೆ (689 ಮೀ), ಧಾರವಾಡ ರಸ್ತೆ ಕಡೆಗೆ (310 ಮೀ), ಹಾಗೂ 350 ಮೀ ಸೇರಿ ಒಟ್ಟು 3.600 ಕಿ.ಮೀ ಮೇಲ್ಸೇತುವೆ ನಿರ್ಮಿಸಲು ಉದ್ದೇಶಿಸಲಾಗಿದೆ. ಎಪ್ರೀಲ್ 20ರಿಂದ ಆಗಸ್ಟ 19ರವರೆಗೆ ಸುಮಾರು 4 ತಿಂಗಳ ಕಾಲ ಚನ್ನಮ್ಮ ವೃತ್ತದಿಂದ ಬಸವ ವನದವರೆಗೆ (500 ಮೀ.), ವಿಜಯಪುರ ರಸ್ತೆಯಲ್ಲಿ ಚನ್ನಮ್ಮ ವೃತ್ತದಿಂದ ಕೋರ್ಟ್ ವೃತ್ತದವರೆಗೆ (150 ಮೀ.) ಹಾಗೂ ಚನ್ನಮ್ಮ ವೃತ್ತದಲ್ಲಿ ಆಯ್ದ ಭಾಗಗಳಲ್ಲಿ ಪಿಲ್ಲರ್ ಕಾಮಗಾರಿಗಳಿಗೆ ಬ್ಯಾರಿಕೇಡಿಂಗ್ ಮಾಡಲು ಚನ್ನಮ್ಮ ವೃತ್ತಕ್ಕೆ ಸಂಪರ್ಕಿಸುವ ರಸ್ತೆಗಳನ್ನು ತಾತ್ಕಾಲಿಕವಾಗಿ ಬಂದ್ ಮಾಡಲಾಗುವುದು.

ಚೆನ್ನಮ್ಮ ವೃತ್ತದಿಂದ ಬಸವವನದವರೆಗೆ ಹಾಗೂ ವಿಜಯಪುರ ರಸ್ತೆಯಲ್ಲಿ 80 ಗಿರ್ಡರ್ ಹಾಗೂ 16 ಸ್ಪಾನ್‌ಗಳ ಸ್ಲಾಬ್‌ಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಚನ್ನಮ್ಮ ವೃತ್ತದಲ್ಲಿ ರೋಟರಿ ಕಾಮಗಾರಿಗಾಗಿ ಪೋರ್ಟ್‌ಲ್ ಕ್ಯಾಪ್ ಹಾಗೂ 8 ಪಿಯರ್‌ಗಳ ನಿರ್ಮಾಣಕ್ಕೆ ರಾಷ್ಟ್ರೀಯ ಹೆದ್ದಾರಿ ಇಲಾಖೆಯು ಸರ್ವಸಿದ್ಧತೆಯನ್ನು ಮಾಡಿಕೊಂಡಿದೆ. 4 ತಿಂಗಳ ಕಾಲ ನಗರ ಸಾರಿಗೆ ನಿಲ್ದಾಣವನ್ನು ಸಂಪೂರ್ಣವಾಗಿ ಬಂದ್ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ರುದ್ರೇಶ ಘಾಳಿ, ಡಿಸಿಪಿ ರವೀಶ ಸಿ.ಆರ್, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧೀಕ್ಷಕ ಅಭಿಯಂತರರಾದ ಟಿ.ಪ್ರದೀಪ ಪತ್ರಿಕಾಗೋಷ್ಠಿಯಲ್ಲಿದ್ದರು.



ಐಟಿ ಪಾರ್ಕ್ ಹತ್ತಿರದಲ್ಲಿ ತಾತ್ಕಾಲಿಕ ಬಸ್ ನಿಲ್ದಾಣ ಸ್ಥಾಪಿಸಲಾಗುವುದು. ಅಲ್ಲದೇ ಉಪ ನಗರ ಬಸ್ ನಿಲ್ದಾಣವನ್ನು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಅಧಿಕಾರಿಗಳು ನಿರ್ವಹಣೆ ಹಾಗೂ ರಕ್ಷಣೆ ಮಾಡಬೇಕು. ವಿಜಯಪುರ ಮತ್ತು ಗದಗ ಹಾಗೂ ಉಳಿದ ಪ್ರದೇಶದಿಂದ ಬರುವ ಬಸ್ಸುಗಳಿಗೆ ಕಾರವಾರ ರಸ್ತೆ, ಸಿ.ಬಿ.ಟಿ. ಹಾಗೂ ಹೊಸೂರ ಬಸ್ ನಿಲ್ದಾಣಗಳಲ್ಲಿ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಟ್ರಾಫಿಕ್ ಸಮಸ್ಯೆಯಾಗದಂತೆ ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ಹುಡ್ಕೋ ಕಾಲೋನಿಯಲ್ಲಿ ಪೊಲೀಸ್ ಜಾಗೃತ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮತ್ತು ಗದಗ ಶಹರ ಸಿಪಿಐ ಬಿ.ಡಿ. ಪಾಟೀಲ ಸ್ಥಳಕ್ಕೆ ಆಗಮಿಸಿ ಜನರಲ್ಲಿ ವಿಶ್ವಾಸ ಮೂಡಿಸುವ ಹಾಗೂ ಜಾಗೃತಿ ಮೂಡಿಸುವಂತೆ ಸಭೆ ನಡೆಸಲು ಸೂಚಿಸಿದ ಹಿನ್ನೆಲೆಯಲ್ಲಿ ಗದಗ–ಬೆಟಗೇರಿ ನಗರದ ವಾರ್ಡ್ ನಂ. 35ರಲ್ಲಿಯ ಹುಡ್ಕೋ ಕಾಲೋನಿಯಲ್ಲಿರುವ ಈಶ್ವರ ದೇವಸ್ಥಾನದಲ್ಲಿ ಪೊಲೀಸ್ ಜಾಗೃತ ಸಭೆ ಜರುಗಿತು.

ಸಭೆಯಲ್ಲಿ ಮಹಿಳಾ ಪಿಎಸ್‌ಐ ರೇಣುಕಾ ಮುಂಡೆವಾಡ ಮಾತನಾಡಿ, ಕಳೆದ 15 ದಿನಗಳಿಂದ ಕಳ್ಳರ ಹಾವಳಿ ಹೆಚ್ಚಾಗಿದ್ದು, ಮಹಿಳೆಯರು ಜಾಗೃತರಾಗಿರಬೇಕು. ತಮಗೇನಾದರೂ ಅನುಮಾನಾಸ್ಪದ ವ್ಯಕ್ತಿಗಳು ಕಂಡುಬಂದಲ್ಲಿ ಪೊಲೀಸ್ ಇಲಾಖೆಯ ತುರ್ತು ಸಂಪರ್ಕ ಸಂಖ್ಯೆ 112ಕ್ಕೆ ಕರೆ ಮಾಡಿ ವಿಷಯ ತಿಳಿಸಿ. ಮನೆಯ ಮುಂಭಾಗ ಸಿಸಿ ಕ್ಯಾಮರಾ ಅಳವಡಿಸಿಕೊಳ್ಳಬೇಕೆಂದು ತಿಳಿಹೇಳಿದರು.ಸಭೆಯಲ್ಲಿ ಪೊಲೀಸ್ ಸಿಬ್ಬಂದಿ ಜಗದೀಶ ಹೊಸಳ್ಳಿ, ಹಿರಿಯರಾದ ಬೋರಯ್ಯ ಕಂಬಿ, ದೇವಸ್ಥಾನದ ಗುರುಗಳಾದ ಹೇಮಗಿರಿಮಠ, ಬಸವರಾಜ ಗಡ್ಡೆಪ್ಪನವರ, ಸೋಮಣ್ಣ ಕಂಬಿ, ಸಂತೋಷ ಗುಡ್ಡದ, ಅಕ್ಷಯ ವಾಸುದೇವ, ಶರಣು, ಅಕ್ಷಯ ಬೆಣಗಿ, ಅಕ್ಷಯ ಜಡಿ, ಲಾಟನಕರ, ಶ್ಯಾಂಡಗೆ, ನವಲಗುಂದ, ಕೋಳಿವಾಡ, ಮಡಿವಾಳರ, ಜೋಗಿನ, ದಾಮೋದರ, ಸೇರಿದಂತೆ ಓಣಿಯರು ಹಿರಿಯರು, ಮುಖಂಡರು, ಮಹಿಳೆಯರು ಉಪಸ್ಥಿತರಿದ್ದರು ಎಂದು ಬಸವರಾಜ ವಿ.ಗಡ್ಡೆಪ್ಪನವರ ತಿಳಿಸಿದ್ದಾರೆ.

### ಶ್ರೀ ಯೋಗಿವೇಮನ ಪ.ಪೂ ಕಾಲೇಜು

# ದ್ವಿತೀಯ ಪಿಯುಸಿ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ





ತಾಲೂಕಿನ ಶ್ರೀ ಯೋಗಿವೇಮನ ಸ್ವತಂತ್ರ ಪದವಿಪೂರ್ವ ಪಿಯು ಕಾಲೇಜಿನ ವಿಜ್ಞಾನ ವಿಭಾಗದಲ್ಲಿ ನಂದಿನಿ ಬಸಲಿಂಗಪ್ಪ ಶೀರನಹಳ್ಳಿ–91.6, ವಿಜಯಲಕ್ಷ್ಮೀ ದೇವಪ್ಪ ಚಕ್ರಸಾಲಿ–90.05 ಫಲಿತಾಂಶ ಗಳಿಸಿದ್ದಾರೆ. ಕಲಾ ವಿಭಾಗದಲ್ಲಿ 35, ವಾಣಿಜ್ಯ ವಿಭಾಗದಲ್ಲಿ 32, ವಿಜ್ಞಾನ ವಿಭಾಗದಲ್ಲಿ 12 ವಿದ್ಯಾರ್ಥಿಗಳಿ ತೇರ್ಗಡೆ ಹೊಂದಿದ್ದು, ಕಾಲೇಜಿನ ಪ್ರಾಚಾರ್ಯರು ಮತ್ತು ಉಪನ್ಯಾಸಕ/ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

# ರೈತರ ಪ್ರತಿಭಟನೆ ಅಂತ್ಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಂಗಳವಾರ ಶಿರಹಟ್ಟಿಯ ರೇಷ್ಮೆ ಇಲಾಖೆ ಕಚೇರಿ ಎದುರುಗಡೆ ರೇಷ್ಮೆ ಬೆಳೆಗಾರರು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅಹೋರಾತ್ರಿ ಉಪವಾಸ ಸತ್ಯಾಗ್ರಹವನ್ನು ಕೈಗೊಂಡಿದ್ದರು.

ಬುಧವಾರ ಪ್ರತಿಭಟನಾ ಸ್ಥಳಕ್ಕೆ ತಹಸೀಲ್ದಾರ ಅನಿಲ ಬಡಿಗೇರ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಚನ್ನಯ್ಯ ದೇವೂರ



ರೈತರ ಬೇಡಿಕೆಗಳ ಈಡೇರಿಕೆಗಾಗಿ ಸಂಬಂಧಿಸಿದ ಮೇಲಧಿಕಾರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಸ್ಥಳಕ್ಕೆ ಆಗಮಿಸುವಂತೆ ಸೂಚಿಸಿದರು. ತರುವಾಯ ಸ್ಥಳಕ್ಕೆ ಇಲಾಖೆಯ ಉಪನಿರ್ದೇಶಕರು ಭೇಟಿ ನೀಡಿ ರೈತರ ಬೇಡಿಕೆಗಳನ್ನು ಸರಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದ ರೈತರು ಪ್ರತಿಭಟನೆಯನ್ನು ಅಂತ್ಯಗೊಳಿಸಿದರು.

## ಟಿ.ಬಿ ಮಾನ್ವಿ ಕಾಲೇಜಿನ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಟಿ.ಬಿ ಮಾನ್ವಿ ಸರ್ಕಾರಿ ಪಿ.ಯು ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ ಶೇ.93ರಷ್ಟಾಗಿದೆ.

ವಿಜ್ಞಾನ ವಿಭಾಗದಲ್ಲಿ ಲಕ್ಷ್ಮೀ ಜಿಗಳೂರ ಶೇ.96.66 ಅಂಕ ಗಳಿಸಿ ಜಿಲ್ಲೆಗೆ ತೃತೀಯ, ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಮಿಸ್ಬಾ ಕೌಸರ ಹುಲಗೇರಿ ಶೇ.95, ಅಕ್ಕಮ್ಮ ಓಂಕಾರಿ ಶೇ.93.5 ಅಂಕ ಗಳಿಸಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಹರೀಶ ನವಲಗುಂದ ಶೇ.86.5, ಮಲ್ಲವ್ವ ವರದಿ ಶೇ.85.5, ಮಂಜುನಾಥ ಈಳಗೇರ ಶೇ. 82.5 ಮತ್ತು ಕಲಾ ವಿಭಾಗದಲ್ಲಿ ಅರುಣಾ ಶಿರಹಟ್ಟಿ ಶೇ. 90, ಮಂಜುನಾಥ ಸಂಕಪ್ಪನವರ ಶೇ. 88.5, ಸುವರ್ಣ ಹಿರೇಮಠ ಶೇ. 87 ಅಂಕ ಗಳಿಸಿದ್ದಾರೆ. ವಿದ್ಯಾರ್ಥಿಗಳ ಸಾಧನಗೆ ಕಾಲೇಜು ಅಭಿವೃದ್ಧಿ ಸಮಿತಿ ಹರ್ಷ ವ್ಯಕ್ತಪಡಿಸಿದೆ.

## ಅವೈಜ್ಞಾನಿಕ-ಅಸುರಕ್ಷಿತ ಮನೆ ಹೆರಿಗೆ ನಿಷೇಧಕ್ಕೆ ಕೇರಳ ವೈದ್ಯರ ಸಂಘ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಕೇರಳ

ಅವೈಜ್ಞಾನಿಕ ಮತ್ತು ಅಸುರಕ್ಷಿತ ಮನೆ ಹೆರಿಗೆಗಳನ್ನು ನಿಲ್ಲಿಸಲು ಕಠಿಣ ಕಾನೂನು ಜಾರಿ ಮಾಡುವಂತೆ ಕೇರಳದ ವೈದ್ಯರ ಸಂಘ ಸರ್ಕಾರಕ್ಕೆ ಒತ್ತಾಯಿಸಿದೆ.

### ಶಾಸಕ ಜಿ.ಎಸ್. ಪಾಟೀಲರ 78ನೇ ಜನ್ಮದಿನದ ಅಂಗವಾಗಿ ಜನಪರ ಕಾರ್ಯಕ್ರಮ

# ಜಿ.ಎಸ್. ಪಾಟೀಲ ಅಪರೂಪದ ರಾಜಕಾರಣಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕ್ಷೇತ್ರದ ಅಭಿವೃದ್ಧಿಯೆಡೆ ಚಿಂತನೆ, ಸದಾ ಜನಸಾಮಾನ್ಯರೊಂದಿಗೆ ಬೆರತು ಜನಸ್ನೇಹಿ ಆಡಳಿತ ನೀಡುವ ಮೂಲಕ ಶಾಸಕ ಜಿ.ಎಸ್. ಪಾಟೀಲ ಅಪರೂಪದ ರಾಜಕಾರಣಿಯಾಗಿದ್ದಾರೆ. ಬದುಕಿನುದ್ದಕ್ಕೂ ಜನಪರ ಕಾಳಜಿ ಇರಿಸಿಕೊಂಡು ಅದರಲ್ಲಿಯೇ ಸಂತೃಪ್ತಿ ಕಂಡ ಅವರು ನಮ್ಮಂತಹ ಯುವ ರಾಜಕಾಣಿಗಳಿಗೆ ಮಾರ್ಗದರ್ಶಕರಾಗಿದ್ದಾರೆ ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ವಿರುಪಾಕ್ಷಪ್ಪ ಯರಾಶಿ ಅಭಿಪ್ರಾಯಪಟ್ಟರು.

ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರ 78ನೇ ಜನ್ಮದಿನದ ಅಂಗವಾಗಿ ಬುಧವಾರ ಅವರ ಅಭಿಮಾನಿಗಳು ಡಂಬಳ ಗ್ರಾಮದ ಪ್ರವಾಸಿ ಮಂದಿರದಲ್ಲಿ ಸಸಿ ನೆಡುವ ಹಾಗೂ ವಿವಿಧ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

78ನೇ ವರ್ಷದ ಹುಟ್ಟುಹಬ್ಬ ಅವರ ಸಾರ್ಥಕ ಬದುಕಿಗೆ ಹಿಡಿದ ಕನ್ನಡಿಯಾಗಿದೆ. ಸದಾ ಜನರ ಪರವಾಗಿ ಚಿಂತಿಸುವ, ಈ ಭಾಗದಲ್ಲಿ ಜನಸಾಮಾನ್ಯರ ಜನನಾಯಕರಾಗಿ ಹೆಸರುವಾಗಿರುವ ಅವರ ಹುಟ್ಟುಹಬ್ಬವನ್ನು ದುಂದುವೆಚ್ಚ ಮಾಡದೆ ಸಸಿ ನೆಡುವುದು ಹಾಗೂ ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮ ಆಯೋಜನೆ ಮಾಡಿರುವುದು ಅತ್ಯಂತ ಸಾರ್ಥಕ ಕಾರ್ಯವಾಗಿದೆ ಎಂದರು.



ಎಸ್.ಸಿ ಬ್ಲಾಕ್ ಕಾಂಗ್ರೆಸ್ ಘಟಕದ ಅಧ್ಯಕ್ಷ ಮರಿಯಪ್ಪ ಸಿದ್ದಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿ, ಶಾಸಕ ಜಿ.ಎಸ್. ಪಾಟೀಲ ಸಾವಿರ ಕೆರೆಗಳ ಸರದಾರ, ಬಡವರ ದೀನ-ದಲಿತರ, ನೊಂದವರ ಪರವಾಗಿ ಸದಾ ಚಿಂತನೆ ಮಾಡುವ ಮೂಲಕ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಮಹೇಶ ಗಡಗಿ, ಮುತ್ತಣ್ ಕೊಂತಿಕಲ್, ಬಸವರಡ್ಡಿ ಬಂಡಿಹಾಳ, ಜಾಕೀರ ಮೂಲಿಮನಿ, ಬುಡ್ನೆಸಾಬ ಅತ್ತಾರ, ಕುಬೇರಪ್ಪ ಕೊಳ್ಳಾರ, ಶರಣು ಬಂಡಿಹಾಳ, ಉರ್ದುಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಎಂ.ಜೆ. ಕಾಸ್ತಾರ, ಬಾಬುಸಾಬ್ ಸರ್ಕವಾಸ, ಬಾಬುಸಾಬ್ ಮೂಲಿಮನಿ, ನಾಗೇಶ ಧರ್ಮಾಧಿಕಾರಿ, ಅಹ್ಮದ ಸರ್ಕವಾಸ, ಶಂಕ್ರಪ್ಪ ಗಡಗಿ, ಬಸವರಾಜ ಶಿರೂಳ, ಮಲ್ಲಿಕಾರ್ಜುನ ಪ್ಯಾಟಿ, ಸುರೇಶ ಗಡಗಿ, ಫಕ್ಕೀರಪ್ಪ ಆದಮ್ಮನವರ, ಶರಣಪ್ಪ ಪ್ಯಾಟಿ, ಯಂಕಣ್ಣ ಗಡಗಿ, ಶರಣು ಬಂಡಿಹಾಳ, ಮಹೇಶ ಗುಡ್ಡದ, ಮಹೇಶ ಬಿಸನಹಳ್ಳಿ, ಮಂಜುನಾಥ ತಳವಾರ, ಬಾಲಚಂದ್ರ ಸಿದ್ದಣ್ಣವರ, ಆದಿತ್ಯ ಗದಗಿನ, ಹುಸೇನ ದೊಡ್ಡಮನಿ, ಮಳ್ಳಪ್ಪ ಒಂಟೆಲಭೋವಿ, ಮಂಜುನಾಥ ನರಗುಂದ, ಸೇರಿದಂತೆ ವಿವಿಧ ಸರ್ಕಾರಿ ಶಾಲೆಗಳ ಮುಖ್ಯಶಿಕ್ಷಕರು, ವಿದ್ಯಾರ್ಥಿಗಳು, ಸಹ ಶಿಕ್ಷಕರು ಭಾಗವಹಿಸಿದ್ದರು.

ಯುವನೇತಾರ ಬಸವರಡ್ಡಿ ಬಂಡಿಹಾಳ ಮಾತನಾಡಿ, ತಮ್ಮ ಆಡಳಿತ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳು ಶಾಶ್ವತವಾಗಿವೆ. ಬರದ ನಾಡೆಂದೇ ಬಿಂಬಿತವಾಗಿದ್ದ ಈ ಭಾಗದಲ್ಲಿ ಗುಳೆ ಹೋಗುತ್ತಿದ್ದ ಜನರ ನೋವು ಅರಿತು ಎಲ್ಲಾ ಕೆರೆ, ಹಳ್ಳಕೊಳ್ಳಗಳನ್ನು ತುಂಬಿಸುವ ಮೂಲಕ ಜಿ.ಎಸ್. ಪಾಟೀಲರು ಈ ಭಾಗದ ಭಗೀರಥರಾಗಿದ್ದಾರೆ ಎಂದು ಹೇಳಿದರು.

### ಚಿತ ಯೋಗ ತರಬೇತಿ ಶಿಬಿರದಲ್ಲಿ ಡಾ. ಮಹಾಂತ ಪ್ರಭುಸ್ವಾಮಿಗಳ ಅಭಿಮತ

# ಆರೋಗ್ಯ ನಿಯಮಗಳ ಪಾಲನೆ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯವೇ ಜೀವನ, ಅನಾರೋಗ್ಯವೇ ಮರಣ. ಆರೋಗ್ಯವಿಲ್ಲದ ಜೀವನ ಬರೀ ಗೋಳು, ಆರೋಗ್ಯವೇ ಸ್ವರ್ವಸ್ವ ಮುಂತಾಗಿ ಆರೋಗ್ಯದ ಮಹಿಮೆ ಬಗ್ಗೆ ಮಾತಾಡುತ್ತೇವೆ. ಆರೋಗ್ಯ ಮಾತಿನಿಂದ ದೊರೆಯುವದಿಲ್ಲ. ಶ್ರಮವಹಿಸಿ ಸಾಧನೆ ಮಾಡಿ ಪಡೆಯಬೇಕು. ಉತ್ತಮ ದಿನಚರಿ, ನಿತ್ಯ ಯೋಗಾಭ್ಯಾಸ, ವ್ಯಾಯಾಮ ಸಾಧನೆ, ಸಾತ್ವಿಕ ಆಹಾರ ಸೇವನೆ, ಸತ್ಸಂಗ, ಮಂತ್ರ /ವಚನ ಪಠಣ, ದುರಾಭ್ಯಾಸಗಳಿಂದ ದೂರ, ದೈಹಿಕ ಶ್ರಮ, ಸೇವಾಕಾರ್ಯಗಳನ್ನು ಪಾಲಿಸಿದರೆ ಖಂಡಿತ ಆರೋಗ್ಯವಂತರಾಗಿರುವೆವು. ಆಗ ಆನಂದಮಯ ಜೀವನ ನಮ್ಮದಾಗುವುದು. ಹೀಗಾಗಿ ಆರೋಗ್ಯ ನಿಯಮಗಳ ಪಾಲನೆ-ಆನಂದ ಜೀವನದ ಜೀವಾಳವಾಗಿದೆ ಎಂದು ಶೇಗುಣಸಿ ವಿರಕ್ತಮಠದ ಡಾ. ಮಹಾಂತಪ್ರಭುಸ್ವಾಮಿಗಳು ಅಭಿಪ್ರಾಯಪಟ್ಟರು.



ಶ್ರೀ ಜಗದ್ಗುರು ತೋಂಟ-ದಾರ್ಯ ಜಾತ್ರಾಮಹೋತ್ಸವ-2025 ಮತ್ತು ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ ಗದಗ ಇವರುಗಳ ಸಹಯೋಗದಲ್ಲಿ ತೆ-ೂಂಟದಾರ್ಯ ಜಾತ್ರೆಯ ನಿಮಿತ್ತ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಅನುಭವ ಮಂಟಪದಲ್ಲಿ ನಡೆದಿರುವ ಉಚಿತ ಯೋಗ ತರಬೇತಿ ಶೀಬಿರದಲ್ಲಿ ಜರುಗಿದ ವಿಶ್ವ ಆರೋಗ್ಯ ದಿನಾಚರಣೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡುತ್ತಿದ್ದರು.

ವೇದಿಕೆಯಲ್ಲಿ ಹಿರಿಯ ಯೋಗ ಸಾಧಕರಾದ ಎಸ್.ಕೆ. ಮೇಲ್ಮುರಿ, ಸದಾನಂದ ಕಾಮತ, ಯೋಗ ಅಭಿಮಾನಿಗಳಾದ ನಾರಾಯಣಸ್ವಾಮಿ, ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಉಪಾಧ್ಯಕ್ಷೆ ಶೈಲಾ ಕೊಡೆಕಲ್ಲ, ಗದಗ ಜಿಲ್ಲಾ ಪತಂಜಲಿ ಯೋಗ ಸಮಿತಿ ಪ್ರಭಾರಿ ಗಿರಿಯಪ್ಪ ಮಡಿವಾಳರ, ಯೋಗ ಶಿಕ್ಷಕಿ ಶೋಭಾ ಗುಗ್ಗರಿ ಉಪಸ್ಥಿತರಿದ್ದು ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಸ್ತುತ ದಿನಮಾನದಲ್ಲಿ ಎಲ್ಲರಿಗೂ ಆರೋಗ್ಯದ ಅಗತ್ಯವಿದೆ. ಯೋಗ ಜನಾಂಗಕ್ಕಿಂತಲೂ ಅತ್ಯವಶ್ಯಕವಾಗಿದೆ. ಅಂತೆಯೇ ಈ ವರ್ಷದ ವಿಶ್ವ ಆರೋಗ್ಯ ದಿನದ ಧ್ಯೇಯ ವಾಕ್ಯ 'ಆರೋಗ್ಯದ ಆರಂಭ, ಭರವಸೆಯ ಭವಿಷ್ಯ' ಎಂಬುದಾಗಿದೆ. ಆದ್ದರಿಂದ ನಾವೆಲ್ಲರೂ ಆರೋಗ್ಯ ಅರಿತು ಆಚರಿಸಿದ್ದಾದರೆ ಈ ನಾಡು ಸುಂದರವಾಗುವುದೆಂದು ಹೇಳಿದರು.

ಈ ಸಂದರ್ಭದಲ್ಲಿ ಬಸವ ಯೋಗಾಶ್ರಮ ಕಡಕೋಳ ಇವರು ಆಯೋಜಿಸಿರುವ ಬಸವ ಆರೋಗ್ಯ ಜಾತ್ರೆ ಅಂಗವಾಗಿ ಜರಗುವ ಕಾರ್ಯಕ್ರಮಗಳ ಮಾಹಿತಿಯನ್ನು ಕಾರ್ಯಕರ್ತರಾದ ಸಂಗಪ್ಪಶೆಟ್ಟರ ಸಭೆಗೆ ತಿಳಿಸಿ ಆಮಂತ್ರಣ ನೀಡಿದರು.

ಶ್ರೀಮಠದ ಮೀಸಲು ಭಕ್ತರಾದ ವೀರಣ್ಣ ಗೋಟಡಕಿ ಮತ್ತು ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ. ಎಂ.ವಿ. ಐಹೊಳ್ಳಿ ಶಿಬಿರದ ಪರವಾಗಿ ಡಾ. ಮಹಾಂತಪ್ರಭುಸ್ವಾಮಿಗಳಿಗೆ ಭಕ್ತಿ ಕಾಣಿಕೆ ಸಮರ್ಪಿಸಿದರು.

ಪ್ರಾರಂಭದಲ್ಲಿ ಶಿಬಿರಾರ್ಥಿಗಳೆಲ್ಲರೂ ಸಾಮೂಹಿಕವಾಗಿ ಆರೋಗ್ಯ ಪ್ರಾರ್ಥನೆ ಹೇಳಿದರು. ಪ್ರೊ. ಡಿ.ಆರ್. ಮಮದಾಪೂರ ಸರ್ವರಿಗೂ ಸ್ವಾಗತ ಕೋರಿದರು. ಶಿಬಿರದ ಮಾರ್ಗದರ್ಶಕ ಕೆ. ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ಕರಿಬಿಷ್ಠಿ ವಂದಿಸಿದರು.

## ಪದಕ ವಿಜೇತ ಪೊಲೀಸರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರಾಮಾಣಿಕ ಮತ್ತು ನಿಸ್ವಾರ್ಥ ಸೇವೆ ಸಲ್ಲಿಸಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಪದಕ ಪಡೆದ ಪೊಲೀಸ್ ಸಿಬ್ಬಂದಿಯನ್ನು ಗ್ರಾಮದ ಲಕ್ಷ್ಮೀ ನಾರಾಯಣ ಪತ್ತಿನ ಸೌಹಾರ್ದ ಸಹಕಾರ ಸಂಘದ ಸದಸ್ಯರು ಸನ್ಮಾನಿಸಿ ಗೌರವಿಸಿದರು.

ಗದಗ ಗ್ರಾಮೀಣ ಪೊಲೀಸ್ ಠಾಣೆಯ ಸಿ.ಪಿ.ಐ ಸಿದ್ದರಾಮೇಶ ಗಡೇದ, ಸಬ್‌ಇನ್ಸ್‌ಪೆಕ್ಟರ್ ಎಲ್. ಕೆ. ಜೂಲಕಟ್ಟಿ, ಹವಾಲ್ದಾರರಾದ ಬಸವರಾಜ ಗುಡ್ಲಾನೂರ, ಪೊಲೀಸ್ ಪೇದೆ ಪ್ರವೀಣ ಕಲ್ಲೂರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಬಸವರಾಜ ಮುಳ್ಳಾಳ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಪ್ರಕಾಶ ಅರಹುಣಶಿ, ಮೃತ್ಯುಂಜಯ ನಡುವಿನಮಠ, ಪ್ರವೀಣ ಕಲಾಲ, ಬಸವರಾಜ ಕವಲೂರ, ವಿನಾಯಕ ಡಿಗ್ಗಾವಿ, ವೀರಣ್ಣ ಅರಹುಣಶಿ, ಈರಣ್ಣ ಮೂಡಲತೋಟ, ಶಿವು ಭಜಂತ್ರಿ, ದೇವರಾಜ ದೇವರಾಜ ಕಮ್ಮಾರ ಸೇರಿದಂತೆ ಇತರರು ಇದ್ದರು.

### ಸಾಧಕ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮದಲ್ಲಿ ಸುನೀಲ ಮಹಾಂತಶೆಟ್ಟರ

# ಸರ್ಕಾರಿ ಕಾಲೇಜುಗಳಲ್ಲಿಯೂ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಡವರು ಮತ್ತು ಗ್ರಾಮೀಣ ಭಾಗದ ಜನರ ಆಶಾಕಿರಣವಾಗಿರುವ ಸರಕಾರಿ ಕಾಲೇಜುಗಳಲ್ಲಿಯೂ ಸಹ ಉತ್ತಮ ಶಿಕ್ಷಣ ದೊರೆ-ಯುತ್ತಿದ್ದು, ಇಲ್ಲಿನ ಮಕ್ಕಳು ಸಾಕಷ್ಟು ಪ್ರತಿಭಾವಂತರಾಗಿರುತ್ತಾರೆ. ಹಾಗಾಗಿ ಉತ್ತಮ ಸಾಧನೆ ಮಾಡುವಲ್ಲಿ ಯಶಸ್ವಿಯಾಗುತ್ತಿದ್ದಾರೆ ಎಂದು ಪಟ್ಟಣದ ಸರಕಾರಿ ಪದವಿಪೂರ್ವ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಸುನೀಲ ಮಹಾಂತಶೆಟ್ಟರ ಹೇಳಿದರು.

ಅವರು ಪಟ್ಟಣದ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ 2024-25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದಲ್ಲಿ ಜಿಲ್ಲೆಗೆ ತೃತೀಯ ಸ್ಥಾನ ಗಳಿಸಿದ ಹಾಗೂ ವಾಣಿಜ್ಯ, ಕಲಾ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿದರು.



ಸರಕಾರಿ ಕಾಲೇಜುಗಳು ಸಹ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆಯುವ ರೀತಿಯಲ್ಲಿ ಫಲಿತಾಂಶದಲ್ಲಿ ಸಾಧನೆ ಮಾಡುತ್ತಿದ್ದು, ಪಟ್ಟಣದ ಸರಕಾರಿ ಪ.ಪೂ ಕಾಲೇಜಿನ ವಾಣಿಜ್ಯ ವಿಭಾಗದಲ್ಲಿ ಶೇ. 98.18, ವಿಜ್ಞಾನ ವಿಭಾಗದಲ್ಲಿ ಶೇ. 89.47, ಹಾಗೂ ಕಲಾ ವಿಭಾಗದಲ್ಲಿ ಶೇ. 88.09 ಫಲಿತಾಂಶ ಸಾಧಿಸಿದ್ದು, ಒಟ್ಟಾರೆಯಾಗಿ ಕಾಲೇಜು ಈ ಬಾರಿ ಶೇ. 92.20ರಷ್ಟು ಉತ್ತಮ ಫಲಿತಾಂಶ ದಾಖಲಿಸಿರುವದು ಈ ಭಾಗಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದರು.

ವಿಜ್ಞಾನ ವಿಭಾಗದಲ್ಲಿ ಲಕ್ಷ್ಮೀ ಜಿಗಳೂರ ಶೇ. 96.58 ಅಂಕಗಳನ್ನು ಗಳಿಸಿ ಜಿಲ್ಲೆಗೆ 3ನೇ ಸ್ಥಾನ, ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿ ಕೀರ್ತಿ ತಂದಿದ್ದಾಳೆ. ವಿಜ್ಞಾನ, ವಾಣಿಜ್ಯ, ಕಲಾ ವಿಭಾಗಗಳಲ್ಲಿ ವಿದ್ಯಾರ್ಥಿಗಳ ಸಾಧನೆ ಮುಂದಿನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗುವಂತೆ ಮಾಡಿದೆ ಎಂದು ಸುನೀಲ ಮಹಾಂತಶೆಟ್ಟರ ಹೇಳಿದರು.

ಕಾಲೇಜಿನ ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ಮಾತನಾಡಿ, ಕಾಲೇಜು ಪ್ರತಿವರ್ಷ ಉತ್ತಮ ಸಾಧನೆ ಮಾಡುತ್ತಿದ್ದು, ಈ ಬಾರಿ ಜಿಲ್ಲೆಯಲ್ಲಿ ಉತ್ತಮ ಸಾಧನೆ ಮಾಡಿ ಗಮನ ಸೆಳೆದಿದೆ. ವಿಷಯವಾರು ಭೌತಶಾಸ್ತ್ರ, ಜೀವಶಾಸ್ತ್ರ, ಲೆಕ್ಕಶಾಸ್ತ್ರ, ರಾಜ್ಯಶಾಸ್ತ್ರ ಹಾಗೂ ಕನ್ನಡ ವಿಷಯಗಳಲ್ಲಿ 100ಕ್ಕೆ 100 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಜಿಲ್ಲೆಗೆ ವಿಜ್ಞಾನ ವಿಭಾಗದಲ್ಲಿ ತೃತಿಯ ಸ್ಥಾನ ಗಳಿಸಿದ ಲಕ್ಷ್ಮೀ ಜಿಗಳೂರ ಕನ್ನಡ ವಿಷಯದಲ್ಲಿ ನೂರಕ್ಕೆ ನೂರು ಅಂಕಗಳನ್ನು ಗಳಿಸಿದ್ದಾಳೆ. ಕಾಲೇಜಿನ ಬೆಳವಣಿಗೆಯಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯವರು ಹಾಗೂ ಸಾರ್ವಜನಿಕರ ಸಹಕಾರ ವಿಶೇಷವಾಗಿದೆ. ಮುಂದಿನ ದಿನಗಳಲ್ಲಿ ಕಾಲೇಜಿನಲ್ಲಿ ಇನ್ನೂ ಅನೇಕ ಸೌಕರ್ಯಗಳು ದೊರೆಯಲಿವೆ ಎಂದು ಹೇಳಿದರು.

ವೇದಿಕೆಯಲ್ಲಿ ಕಮಿಟಿಯ ನವೀನ ಬೆಳ್ಳಟ್ಟಿ, ಶಕ್ತಿ ಕತ್ತಿ, ಮೈನುದ್ದಿನ ಸೂರಣಗಿ ಉಪನ್ಯಾಸಕರುಗಳಾದ ವಿನಾಯಕ ವೇತಾಳ, ಎನ್.ಓ. ಸಾತಪೂತೆ, ಬಿ.ಎನ್. ದೊಡ್ಡಮನಿ, ಡಾ. ಬಿ.ಎಂ. ಅರಳಹಳ್ಳಿ ಮುಂತಾದವರಿದ್ದರು.

# ಸಾಧನೆ ತೃಪ್ತಿ ತಂದಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ನಿರಂತರ ಶ್ರಮ, ತಂದೆ - ತಾಯಿ ಮತ್ತು ಗುರುಗಳ ಪ್ರೋತ್ಸಾಹದಿಂದ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ದ್ವಿತೀಯ ಪಿಯುಸಿ ಪರೀಕ್ಷೆಯ ವಾಣಿಜ್ಯ ವಿಭಾಗದಲ್ಲಿ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದ ಎಎಸ್‌ಎಸ್ ಪ.ಪೂ ಕಾಲೇಜಿನ ವಿದ್ಯಾರ್ಥಿ ವಿಜಯರಾಜ ಶಿದ್ಲಿಂಗ ಹೇಳಿದರು.

ಅವರು ಗಂಗಾಪೂರ ಪೇಟೆಯಲ್ಲಿ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿ ಹಾಗೂ ಗುರು-ಹಿರಿಯರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವಿಜಯರಾಜ ತಂದೆ ನಾಗೇಂದ್ರಸಾ ಶಿದ್ಲಿಂಗ ಮಾತನಾಡಿ, ಮಗನ ಶ್ರಮಕ್ಕೆ ತಕ್ಕ ಪ್ರತಿಫಲ ಸಿಕ್ಕಿರುವದರಿಂದ ಸಾಧನೆಯ ಬಗ್ಗೆ ಹೆಮ್ಮೆ ಇದೆ. ಮುಂದಿನ ಅವನ ಭವಿಷ್ಯಕ್ಕೆ ನಾವೆಲ್ಲರೂ ಸಹಕಾರ ನೀಡುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಓಣಿಯ ಹಿರಿಯರಾದ ಪರಶುರಾಮ ಹಬೀಬ, ಮೋಹನ ಇಮರಾಪೂರ, ಮಂಜುನಾಥ ಕೆಂದೂಳಿ, ಲಕ್ಷ್ಮಣ ಬಾಂಡಗೆ, ಮುತ್ತು ಜಡಿ, ವೆಂಕಟೇಶ ಇಮರಾಪೂರ, ಚೆನ್ನಪ್ಪ ಕೊಪ್ಪದ ಹಾಗೂ ಕುಟುಂಬದವರಾದ ದತ್ತುಸಾ ಶಿದ್ಲಿಂಗ ದಂಪತಿಗಳು ಉಪಸ್ಥಿತರಿದ್ದರು.

ಕರ್ನಾಟಕ ಸರಕಾರ
ಜಿಲ್ಲಾ ಪಂಚಾಯತ, ಗದಗ.
**ಕಾರ್ಯನಿರ್ವಾಹಕ ಇಂಜಿನೀಯರ, ಪಂ.ರಾಜ್.ಇಂ. ವಿಭಾಗ, ಗದಗ**
ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025-26/69 ದಿನಾಂಕ : 07-04-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 6 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2024-25 ನೇ ಸಾಲಿನ ಐ.ಸಿ.ಡಿ.ಎಸ್. ಅನುದಾನ ಮತ್ತು MGNREGA ಒಗ್ಗೂಡುವಿಕೆ ಯೋಜನೆಯಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos: (1) RDPR/2024-25/BD/WORK_INDENT : 14002, 14003 & 13965 (2) RDPR/2025-26/BD/WORK_INDENT : 13998, 14114 & 14115**

ಟೆಂಡರಿಗಿಟ್ಟ ಕನಿಷ್ಠ ಮೊತ್ತ **ರೂ. 14.83 ಲಕ್ಷ** ಮತ್ತು ಗರಿಷ್ಠ ಮೊತ್ತ **ರೂ. 15.19 ಲಕ್ಷಗಳು** ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ: ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟಿ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ **ದಿನಾಂಕ: 09-04-2025** ರಿಂದ **24-04-2025** ರಂದು **16.00** ಗಂಟೆಯವರೆಗೆ. ಟೆಂಡರ ತೆರೆಯುವ **ದಿನಾಂಕ: 25-04-2025** ರಂದು **16.30** ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ: 13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,
ಪಂ.ರಾಜ್.ಇಂಜಿನೀಯರಿಂಗ್ ವಿಭಾಗ, ಗದಗ.
ವಾ.ಸಾ.ಇ/ಗದಗ/17/ದೇಶಪಾಂಡೆಪಬ್ಲಿಸಿಟಿ/2025-26

## ಡಾ|| ಬಿ ಆರ್ ಅಂಬೇಡ್ಕರ ಜಯಂತಿ ಹಿನ್ನೆಲೆ: ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ - ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರು ಎಪ್ರಿಲ್ 14ರಂದು ಡಾ|| ಬಿ ಆರ್ ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಗರಸಭೆ ಅಧಿಕಾರಿಗಳು ನಿಷೇಧ ಮಾಡಿದ್ದಾರೆ. ಹೀಗಾಗಿ ಅಂದು ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದೆ ಇರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸ್ ರದ್ದು ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ್ ಯೋಜನೆಯಲ್ಲಿ 17 ಸಾವಿರ ಕೋಟಿ ಹಣ ದುರುಪಯೋಗ: ಎನ್.ಆರ್. ರಮೇಶ್ ಆರೋಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರದ ಪ್ರಮುಖ ಯೋಜನೆಯಾದ ಅಟಲ್ ಪುನರುಜ್ಜೀವನ ಮತ್ತು ನಗರ ಪರಿವರ್ತನೆ (ಅಮೃತ್) ಯೋಜನೆಯಡಿ 17,000 ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಇಬ್ಬರು ಕಾಂಗ್ರೆಸ್ ಸಚಿವರು ಮತ್ತು ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ವಿರುದ್ಧ ಸಾಮಾಜಿಕ ಕಾರ್ಯಕರ್ತ ಮತ್ತು ಹಿರಿಯ ಬಿಜೆಪಿ ನಾಯಕ ಎನ್. ಆರ್. ರಮೇಶ್ ದೂರು ದಾಖಲಿಸಿದ್ದಾರೆ.

ಈ ಬಗ್ಗೆ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರಮೇಶ್, ರಾಜ್ಯ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಪುರಸಭೆ ಆಡಳಿತ ಸಚಿವ ರಹೀಮ್ ಖಾನ್, ಕಾಂಗ್ರೆಸ್ ಶಾಸಕ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಕೆಯುಡಬ್ಲ್ಯೂ ಮತ್ತು ಡಿಬಿ) ಅಧ್ಯಕ್ಷ ವಿನಯ್ ಕುಲಕರ್ಣಿ ವಿರುದ್ಧ ದೂರು ದಾಖಲಿಸಿರುವುದಾಗಿ ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka